ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 88 Issue: | ರಾಯಚೂರು Raichur | 20-09-2026 | ಭಾನುವಾರ Sunday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685



## ಶೀಘ್ರದಲ್ಲೇ ನಂದಿನಿ ಹಾಲಿನ ದರ ಏರಿಕೆ? ಸುಳಿವು ಕೊಟ್ಟ ಸಿಎಂ

## ಪ್ರತಿಯೊಂದು ಮನವಿಯನ್ನು ಕೂಲಂಕುಷವಾಗಿ ಪರಿಶೀಲಿಸಿ, ತ್ವರಿತವಾಗಿ ಪರಿಹರಿಸಲಾಗುವುದು: ಜಿಲ್ಲಾಧಿಕಾರಿ ಪೂವಿತಾ ಎಸ್



ರಾಯಚೂರು ಸೆ. 19 (ಕರ್ನಾಟಕ ವಾರ್ತೆ): ಮಾನ್ಯ ಮುಖ್ಯಮಂತ್ರಿಗಳ ಸೂಚನೆಯಂತೆ ಜನರ ಮನೆ 'ಬಾಗಿಲಿಗೆ ಆಡಳಿತ' ತಲುಪಿಸುವ ನಿಟ್ಟಿನಲ್ಲಿ ಪ್ರತಿಯೊಂದು ಸಾರ್ವಜನಿಕರ ಮನವಿಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ತ್ವರಿತವಾಗಿ ಅರ್ಜಿಗಳ ವಿಲೇವಾರಿ ಮಾಡಲಾಗುವುದು ಮತ್ತು ಪರಿಹಾರದ ಮಾಹಿತಿಯನ್ನು ಅರ್ಜಿದಾರರಿಗೆ ನೀಡಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಸಪ್ಟೆಂಬರ್ 19ರ ಶನಿವಾರ ದಂದು ಜಿಲ್ಲೆಯ ಲಿಂಗಸುಗೂರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಜಿಲ್ಲಾಡಳಿತ, ತಾಲೂಕು ಆಡಳಿತ, ತಾಲೂಕು ಪಂಚಾಯತ್ ಹಾಗೂ ವಿವಿಧ ಇಲಾಖೆಯಗಳ ಸಹಯೋಗದೊಂದಿಗೆ ಪ್ರಜಾಸೇವಾ ಆಂದೋಲನ ಸಭೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾರ್ವಜನಿಕರ ಕುಂದುಕೊರತೆಗಳನ್ನು ಬಗೆಹರಿಸಿ, ಅವರ ಮನೆಬಾಗಿಲಿಗೇ ಸೌಲಭ್ಯಗಳನ್ನು ತಲುಪಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿರುವ ಪ್ರಜಾಸೇವಾ ಆಂದೋಲನ ಕಾರ್ಯಕ್ರಮವು ಲಿಂಗಸುಗೂರು ತಾಲೂಕು ಮತ್ತು ಹೋಬಳಿ ಮಟ್ಟದಲ್ಲಿ ಯಶಸ್ವಿಯಾಗಿ ನಡೆಯುತ್ತಿದೆ. ಪ್ರಜಾಸೇವಾ ಆಂದೋಲನವು ಸತತ ಮೂರನೇ ಶನಿವಾರವೂ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಯಶಸ್ವಿಯಾಗಿ ಮುಂದುವರಿಯುತ್ತಿದೆ.

2ನೇ ಪುಟಕ್ಕೆ

## ಪ್ರಜಾ ಸೇವೆ: ಜನರ ಅಹವಾಲುಗಳಿಗೆ ಸ್ಥಳದಲ್ಲೇ ಸ್ಪಂದನೆ



ರಾಯಚೂರು: ಸರ್ಕಾರಿ ಕಚೇರಿಗಳಿಗೆ ಸಾರ್ವಜನಿಕರು ಪದೇಪದೇ ಅಲೆದಾಡುವ ಪರಿಸ್ಥಿತಿಯನ್ನು ತಪ್ಪಿಸಿ, ವಿವಿಧ ಇಲಾಖೆಗಳ ಸೇವೆ ಹಾಗೂ ಸಮಸ್ಯೆಗಳಿಗೆ ಒಂದೇ ವೇದಿಕೆಯಲ್ಲಿ ಪರಿಹಾರ ಒದಗಿಸುವ ಉದ್ದೇಶದಿಂದ ಗಿಲ್ಲೆಸುಗೂರು ಗ್ರಾಮದಲ್ಲಿ ತಾಲ್ಲೂಕು ಮಟ್ಟದ ಪ್ರಜಾ ಸೇವೆ ಕಾರ್ಯಕ್ರಮ ಆಯೋಜಿಸಲಾಯಿತು.

ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ನೇತೃತ್ವದಲ್ಲಿ ನಡೆದ ಕಾರ್ಯಕ್ರಮಕ್ಕೆ ಗಿಲ್ಲೆಸುಗೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸಿ, ತಮ್ಮ ಸಮಸ್ಯೆ, ಬೇಡಿಕೆ ಹಾಗೂ ಅಹವಾಲುಗಳನ್ನು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳ ಗಮನಕ್ಕೆ ತಂದರು.

ಕಂದಾಯ, ಗ್ರಾಮೀಣಾಭಿವೃದ್ಧಿ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಸಮಾಜ ಕಲ್ಯಾಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದು, ಸಾರ್ವಜನಿಕರಿಂದ ಬಂದ ಅರ್ಜಿಗಳನ್ನು ಪರಿಶೀಲಿಸಿದರು. ತಕ್ಷಣ ಪರಿಹರಿಸಬಹುದಾದ ಹಲವು ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಕ್ರಮ ಕೈಗೊಳ್ಳಲಾಗಿದ್ದು, ಹೆಚ್ಚಿನ ಪರಿಶೀಲನೆ ಅಗತ್ಯವಿರುವ ಅರ್ಜಿಗಳನ್ನು ಸಂಬಂಧಿಸಿದ ಅಧಿಕಾರಿಗಳಿಗೆ ವಹಿಸಿ ಶೀಘ್ರ ಇತ್ಯರ್ಥಪಡಿಸುವಂತೆ ಸೂಚಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಬಸನಗೌಡ ದದ್ದಲ್, ಜನರು ತಮ್ಮ ಕೆಲಸಗಳಿಗಾಗಿ ಕಚೇರಿಗಳ ಸುತ್ತ ಅಲೆದಾಡುವ ಬದಲು ಆಡಳಿತವೇ ಅವರ ಬಳಿಗೆ ತೆರಳಿ ಸೇವೆ ನೀಡಬೇಕು ಎಂಬುದು ಪ್ರಜಾ ಸೇವೆಯ ಪ್ರಮುಖ ಆಶಯವಾಗಿದೆ. ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸುವುದರ ಜೊತೆಗೆ ಅವುಗಳಿಗೆ ಸಮಯಬದ್ಧವಾಗಿ ಸ್ಪಂದಿಸುವುದು ಅಗತ್ಯ ಎಂದು ಹೇಳಿದರು.

ಸರ್ಕಾರದ ವಿವಿಧ ಯೋಜನೆಗಳು ಮತ್ತು ಸೌಲಭ್ಯಗಳು ಅರ್ಹ

2ನೇ ಪುಟಕ್ಕೆ




## ಶಿಕ್ಷಕರ ಸೇವೆಗೆ ಸರಿಸಾಟಿಯಾದ ಸೇವೆ ಮತ್ತೊಂದಿಲ್ಲ: ಎನ್.ಎಸ್. ಬೋಸರಾಜು




ರಾಯಚೂರು: ಸಮಾಜದ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಶಿಕ್ಷಕರ ಸೇವೆಗೆ ಸರಿಸಾಟಿಯಾದ ಮತ್ತೊಂದು ಸೇವೆ ಇಲ್ಲ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು.

ನಗರದ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶಿಕ್ಷಕರ ದಿನಾಚರಣೆ ಅಂಗವಾಗಿ ಸಹರಾ ಎಜ್ಯುಕೇಷನ್ ಆ್ಯಂಡ್ ಚಾರಿಟೆಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವ ದಾನಿಗಳ ಸಹಕಾರದೊಂದಿಗೆ ಶಾಲೆ ಆರಂಭಿಸಿ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಸಹರಾ ಶಿಕ್ಷಣ ಸಂಸ್ಥೆಯ ಕಾರ್ಯ ಮಾದರಿಯಾಗಿದೆ. ಸಂಸ್ಥೆಯ ಶೈಕ್ಷಣಿಕ ಚಟುವಟಿಕೆಗಳಿಗೆ ತಮ್ಮ ಸಹಕಾರ ಮುಂದುವರಿಯಲಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣದ ಅವರ ಪ್ರಯತ್ನದಿಂದ ಗ್ರಾಮೀಣ ಭಾಗದಲ್ಲಿ ಸರ್ಕಾರ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಸಹಯೋಗದಲ್ಲಿ ಪ್ರತಿ ಎರಡು ಗ್ರಾಮ ಪಂಚಾಯಿತಿಗಳಿಗೆ ಒಂದರಂತೆ ಒಂದನೇ ತರಗತಿಯಿಂದ 12ನೇ ತರಗತಿವರೆಗೆ ಶಾಲಾ-ಕಾಲೇಜುಗಳನ್ನು ಆರಂಭಿಸುವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು. ಡಿ.ಕೆ. ಶಿವಕುಮಾರ್ ಅವರು 2026ರ ಜೂನ್ 3ರಿಂದ ಕರ್ನಾಟಕದ ಮುಖ್ಯಮಂತ್ರಿಯಾಗಿರುವುದನ್ನು ರಾಜ್ಯ ಸರ್ಕಾರದ ಅಧಿಕೃತ ಮೂಲಗಳೂ ದಾಖಲಿಸಿವೆ.

ಸಂವಿಧಾನದ 371(ಜೆ) ಕಲಂನಡಿ ಮತ್ತೊಂದಿಲ್ಲ. ಕಲ್ಯಾಣ ಕರ್ನಾಟಕದ ಶಿಕ್ಷಣ ಸೇರಿದಂತೆ ಸರ್ವಾಂಗೀಣ ಅಭಿವೃದ್ಧಿಗೆ ಸರ್ಕಾರ ₹5 ಸಾವಿರ ಕೋಟಿ ಮೀಸಲಿಟ್ಟಿದೆ ಎಂದು ಹೇಳಿದರು.

ಕೇವಲ ನಾಲ್ಕು ವರ್ಷಗಳಲ್ಲಿ ಸಹರಾ ಶಿಕ್ಷಣ ಸಂಸ್ಥೆ ಉತ್ತಮವಾಗಿ ಬೆಳೆದಿರುವುದು ಶ್ಲಾಘನೀಯ. ಸಂಸ್ಥೆ ಇನ್ನಷ್ಟು ಎತ್ತರಕ್ಕೆ ಬೆಳೆದು ಈ ಭಾಗದ ಶೈಕ್ಷಣಿಕ ಅಭಿವೃದ್ಧಿಗೆ ತನ್ನದೇ ಆದ ಕೊಡುಗೆ ನೀಡಲಿ ಎಂದು ಆಶಿಸಿದರು.

ಕಾಂಗ್ರೆಸ್ ಹಿರಿಯ ಮುಖಂಡರಾದ ಜಯಣ್ಣ ಹಾಗೂ ಹೈಫಿರೋಜ್ ಮಾತನಾಡಿದರು. ಕಾರ್ಯಕ್ರಮಕ್ಕೂ ಮುನ್ನ ಡಾ. ಸರ್ವಪಲ್ಲಿ

2ನೇ ಪುಟಕ್ಕೆ

## ರೈತರಿಗೆ 12 ಗಂಟೆ ವಿದ್ಯುತ್ ಪೂರೈಕೆಗೆ ಆಗ್ರಹ: ಸೆ.21ರಂದು ಬೃಹತ್ ಜನಾಂದೋಲನ



ರಾಯಚೂರು: ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ರೈತರು ಸಂಕಷ್ಟ ಎದುರಿಸುತ್ತಿದ್ದು, ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ವಿದ್ಯುತ್ ಪೂರೈಕೆಯೂ ಸಮರ್ಪಕವಾಗಿಲ್ಲ. ರಾಯಚೂರು ಗ್ರಾಮೀಣ ಕ್ಷೇತ್ರಕ್ಕೆ ನಿರಂತರ 12 ಗಂಟೆ ಹಾಗೂ ಜಿಲ್ಲೆಯ ಇತರ ತಾಲೂಕುಗಳಿಗೆ ಕನಿಷ್ಠ 8 ಗಂಟೆ ವಿದ್ಯುತ್ ಪೂರೈಸಬೇಕು ಎಂದು ಮಾಜಿ ಶಾಸಕ ತಿಪ್ಪರಾಜು ಹವಾಲ್ದಾರ್ ಆಗ್ರಹಿಸಿದರು. ತಿಪ್ಪರಾಜು ಹವಾಲ್ದಾರ್ 2013ರಲ್ಲಿ ರಾಯಚೂರು ಗ್ರಾಮೀಣ ಕ್ಷೇತ್ರದಿಂದ ಆಯ್ಕೆಯಾಗಿದ್ದರು; ಪ್ರಸ್ತುತ ಕ್ಷೇತ್ರವನ್ನು ಬಸನಗೌಡ ದದ್ದಲ್ ಪ್ರತಿನಿಧಿಸುತ್ತಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ಉತ್ಪಾದಿಸಿ ನೀಡುವ ರಾಯಚೂರು ಜಿಲ್ಲೆಯಲ್ಲಿಯೇ ರೈತರು ವಿದ್ಯುತ್ ಕೊರತೆ ಎದುರಿಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

2016ರಲ್ಲಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ 12 ಗಂಟೆ ವಿದ್ಯುತ್ ಒದಗಿಸುವ ಕುರಿತು ಸರ್ಕಾರ ಲಿಖಿತ ಆದೇಶ ಹೊರಡಿಸಿತ್ತು. ಆದರೆ ಆ ಆದೇಶ ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿಲ್ಲ ಎಂದು ಆರೋಪಿಸಿದ ಅವರು, ಬರ ಪರಿಸ್ಥಿತಿಯಲ್ಲಿ ಬೆಳೆ ಉಳಿಸಿಕೊಳ್ಳಲು ರೈತರಿಗೆ ನಿರಂತರ ವಿದ್ಯುತ್ ಅಗತ್ಯವಾಗಿದ್ದು, ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬರ ಘೋಷಣೆಯಾಗಿದ್ದರೂ ರೈತರಿಗೆ ಅಗತ್ಯ ಪರಿಹಾರ ತಲುಪಿಲ್ಲ ಎಂದು ಆರೋಪಿಸಿದ ಹವಾಲ್ದಾರ್, ಪ್ರತಿ ಎಕರೆಗೆ ₹50 ಸಾವಿರ ಬರ ಪರಿಹಾರ ನೀಡಬೇಕು. ರಾಜ್ಯ ಸರ್ಕಾರ ಬರ ಪರಿಸ್ಥಿತಿಗೆ ಸಂಬಂಧಿಸಿದ ಅಗತ್ಯ ಮಾಹಿತಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ, ರೈತರಿಗೆ ಪರಿಹಾರ ದೊರಕಿಸಲು ಕ್ರಮ ವಹಿಸಬೇಕು ಎಂದು ಹೇಳಿದರು.

ಗಣೇಕಲ್ ಜಲಾಶಯಕ್ಕೆ ಸಮರ್ಪಕವಾಗಿ ನೀರು ತಲುಪದಿರುವುದರಿಂದ ರೈತರು ಹಾಗೂ ಸಾರ್ವಜನಿಕರು ಸಮಸ್ಯೆ ಎದುರಿಸುತ್ತಿದ್ದಾರೆ. ನೀರಾವರಿ ವ್ಯವಸ್ಥೆಯನ್ನು ಸರಿಪಡಿಸಿ ಕೊನೆಯ ಭಾಗದ ರೈತರೊಂದಿಗೆ ಮೇಲ್ಭಾಗದ ರೈತರಿಗೂ ಸಮರ್ಪಕವಾಗಿ ನೀರು ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಹಾಲಿ ಶಾಸಕ ಬಸನಗೌಡ ದದ್ದಲ್ ಅವರ ಅಭಿವೃದ್ಧಿ ಕುರಿತ ಹೇಳಿಕೆಗಳನ್ನೂ ಪ್ರಶ್ನಿಸಿದ ಹವಾಲ್ದಾರ್, ಕ್ಷೇತ್ರದಲ್ಲಿನ ಜಲಾಶಯಗಳು, ನೀರಾವರಿ ವ್ಯವಸ್ಥೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ವಾಸ್ತವ ಸ್ಥಿತಿಯ ಕುರಿತು ಹಂತ ಹಂತವಾಗಿ ಸಾರ್ವಜನಿಕರಿಗೆ ಮಾಹಿತಿ ನೀಡಲಾಗುವುದು ಎಂದು ಹೇಳಿದರು. ಬಸನಗೌಡ ದದ್ದಲ್ ಅವರು ಪ್ರಸ್ತುತ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾಗಿದ್ದಾರೆ.

ರೈತರ ಸಮಸ್ಯೆಗಳು, ವಿದ್ಯುತ್ ಮತ್ತು ನೀರಿನ ಕೊರತೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಸೆ.21ರಂದು ರಾಯಚೂರಿನಲ್ಲಿ ಬೃಹತ್ ಜನಾಂದೋಲನ ನಡೆಸಲಾಗುವುದು. ಅಂಬೇಡ್ಕರ್ ವೃತ್ತದಿಂದ ವಾಲ್ಮೀಕಿ ವೃತ್ತದವರೆಗೆ ಶಾಂತಿಯುತ ಪ್ರತಿಭಟನಾ ಮೆರವಣಿಗೆ ನಡೆಸಿ, ನಂತರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶರಣಪ್ಪ, ಮಹಾಂತೇಶ್, ಜಗದೀಶ್, ಕೇಶವರೆಡ್ಡಿ, ಬಂಡೇಶ್, ಅಚ್ಚುತ್ ರೆಡ್ಡಿ, ಮಲ್ಲಿಕಾರ್ಜುನ, ರಂಗಪ್ಪ, ಖಾಸಿಂ ನಾಯಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಟ್ರ್ಯಾಕ್ಟರ್ ಅಪಘಾತ: ಇಬ್ಬರು ಬಾಲಕರು ಸಾವು, ಮತ್ತೊಬ್ಬ ಗಂಭೀರ



ರಾಯಚೂರು, ಸೆ.19: ನಗರದ ಎಂ. ಈರಣ್ಣ ವೃತ್ತದ ಬಳಿ ಗಣೇಶ ಮೂರ್ತಿ ವಿಸರ್ಜನೆ ಮೆರವಣಿಗೆಯ ವೇಳೆ ಟ್ರ್ಯಾಕ್ಟರ್ ನಿಯಂತ್ರಣ ತಪ್ಪಿ ಸಂಭವಿಸಿದ ಅಪಘಾತದಲ್ಲಿ ಇಬ್ಬರು ಬಾಲಕರು ಮೃತಪಟ್ಟಿದ್ದು, ಮತ್ತೊಬ್ಬ ಬಾಲಕ ಗಂಭೀರವಾಗಿ ಗಾಯಗೊಂಡ ಘಟನೆ ಶನಿವಾರ ನಡೆದಿದೆ.

ಮೃತರನ್ನು ಸುಚಿತ್ ಕುಮಾರ್ (16) ಹಾಗೂ ಚರಣ್ ಕುಮಾರ್ (14) ಎಂದು ಗುರುತಿಸಲಾಗಿದೆ. ವಿಜಯಕುಮಾರ್ ಎಂಬ ಬಾಲಕ ಗಂಭೀರವಾಗಿ ಗಾಯಗೊಂಡಿದ್ದು, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್) ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಗಣೇಶ ಮೂರ್ತಿಯನ್ನು ವಿಸರ್ಜನೆಗಾಗಿ ಮೆರವಣಿಗೆಯಲ್ಲಿ ಕೊಂಡೊಯ್ಯುತ್ತಿದ್ದ ವೇಳೆ ಟ್ರ್ಯಾಕ್ಟರ್ ಎಂ. ಈರಣ್ಣ ವೃತ್ತದ ಸಮೀಪ ರಸ್ತೆ ಹಂಪ್ ದಾಟುವಾಗ ಸಮತೋಲನ ಕಳೆದುಕೊಂಡಿದೆ. ಈ ಸಂದರ್ಭದಲ್ಲಿ ಟ್ರ್ಯಾಕ್ಟರ್‌ನಲ್ಲಿದ್ದ ಸುಚಿತ್ ಕುಮಾರ್ ಮತ್ತು ಚರಣ್ ಕುಮಾರ್ ಕೆಳಗೆ ಬಿದ್ದು ವಾಹನದ ಚಕ್ರಕ್ಕೆ ಸಿಲುಕಿದ್ದಾರೆ.

ಗಂಭೀರವಾಗಿ ಗಾಯಗೊಂಡ ಅವರನ್ನು

2ನೇ ಪುಟಕ್ಕೆ

## ಮಹಿಳೆ ಮೇಲೆ ಕಲ್ಲಿನಿಂದ ಹಲ್ಲೆ: ಚಿಕಿತ್ಸೆ ಫಲಿಸದೆ ಸಾವು, ಇಬ್ಬರು ವಶಕ್ಕೆ



ಸಿಂಧನೂರು: ತಾಲೂಕಿನ ಆರ್‌ಎಚ್ ಕ್ಯಾಂಪ್5ರ ಹೊರವಲಯದ ಜಮೀನಿನಲ್ಲಿ ಮಹಿಳೆಯೊಬ್ಬರ ಮೇಲೆ ಕಲ್ಲಿನಿಂದ ಹಲ್ಲೆ ನಡೆಸಿದ ಘಟನೆ ಶನಿವಾರ ಬೆಳಕಿಗೆ ಬಂದಿದ್ದು, ಗಂಭೀರವಾಗಿ ಗಾಯಗೊಂಡಿದ್ದ ಮಹಿಳೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ಮೃತರನ್ನು ಆರ್‌ಎಚ್ ಕ್ಯಾಂಪ್4 ನಿವಾಸಿ ಸ್ನೇಹಾ ಎಂದು ಗುರುತಿಸಲಾಗಿದೆ. ಅವರ ವಯಸ್ಸಿನ ಕುರಿತು ವಿವಿಧ ವರದಿಗಳಲ್ಲಿ 25 ಹಾಗೂ 26 ವರ್ಷ ಎಂದು ಉಲ್ಲೇಖವಾಗಿದ್ದು, ಅಧಿಕೃತ ದೃಢೀಕರಣ ಇನ್ನಷ್ಟೇ ಲಭ್ಯವಾಗಬೇಕಿದೆ.

ಘಟನಾ ಸ್ಥಳದಲ್ಲಿ ಸ್ನೇಹಾ ಅವರ ಸುಮಾರು ಒಂದೂವರೆ ವರ್ಷದ ಮಗು ತಾಯಿಯ ಬಳಿ ಅಳುತ್ತಾ ಕಂಡುಬಂದಿದೆ. ಮಗುವಿನ ಅಳುವಿನ ಶಬ್ದ ಕೇಳಿದ ಸ್ಥಳೀಯರು ಸ್ಥಳಕ್ಕೆ ತೆರಳಿ ವಿಷಯ ತಿಳಿದು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಸಿಂಧನೂರು ಗ್ರಾಮೀಣ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದಾಗ ಸ್ನೇಹಾ ಇನ್ನೂ ಜೀವಂತವಾಗಿದ್ದರು ಎನ್ನಲಾಗಿದ್ದು, ತಕ್ಷಣ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ಚಿಕಿತ್ಸೆ

2ನೇ ಪುಟಕ್ಕೆ

## ಬರ ಪರಿಸ್ಥಿತಿಯಲ್ಲಿ ಜಿಲ್ಲಾ ಸಾಹಿತ್ಯ ಸಮ್ಮೇಳನದ ಅಗತ್ಯವೇನು?: ಅಣ್ಣಪ್ಪ ಮೇಟಿಗೌಡ



ರಾಯಚೂರು, ಸೆ.18: ಕಳೆದ ನಾಲ್ಕು ವರ್ಷ ಎಂಟು ತಿಂಗಳ ಕಾಲ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸದೆ, ಅಧಿಕಾರಾವಧಿ ಮುಗಿಯುವ ಹಂತದಲ್ಲಿ ಸಮ್ಮೇಳನ ಆಯೋಜಿಸಲು ಮುಂದಾಗಿರುವುದರ ಉದ್ದೇಶವೇನು ಎಂದು ಅಣ್ಣಪ್ಪ ಮೇಟಿಗೌಡ ಪ್ರಶ್ನಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಅದ್ದೂರಿಯಾಗಿ ಸಾಹಿತ್ಯ ಸಮ್ಮೇಳನ ನಡೆಸುವ ಬದಲು ಪರಿಸ್ಥಿತಿ ಸುಧಾರಿಸಿದ ಬಳಿಕ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಆಯೋಜಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟರು.

ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಕ್ಟೋಬರ್ 24 ಮತ್ತು 25ರಂದು 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸಲು ಸಿದ್ಧತೆ ಕೈಗೊಂಡಿದ್ದು, ಸ್ವಾಗತ ಸಮಿತಿಯನ್ನೂ ರಚಿಸಲಾಗಿದೆ.

ಸಮ್ಮೇಳನದ ದಿನಾಂಕ ನಿಗದಿಪಡಿಸುವ ಮುನ್ನ ಜಿಲ್ಲೆಯ ಸಾಹಿತಿಗಳು, ಕನ್ನಡಾಭಿಮಾನಿಗಳು ಹಾಗೂ ಪರಿಷತ್ತಿನ ಪ್ರತಿನಿಧಿಗಳ ಅಭಿಪ್ರಾಯ ಪಡೆಯಬೇಕಿತ್ತು. ಕೆಲವರನ್ನು ಮಾತ್ರ ಒಳಗೊಂಡ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ ಎಂಬ ಆರೋಪವಿದ್ದು, ಈ ಬಗ್ಗೆ ಜಿಲ್ಲಾ ಕಸಾಪ ಪದಾಧಿಕಾರಿಗಳು ಸ್ಪಷ್ಟನೆ ನೀಡಬೇಕು ಎಂದು ಮೇಟಿಗೌಡ ಒತ್ತಾಯಿಸಿದರು.

ಕನ್ನಡ ಸಾಹಿತ್ಯ ಸಮ್ಮೇಳನ ಕೆಲವರ ಕಾರ್ಯಕ್ರಮವಾಗದೆ ಜಿಲ್ಲೆಯ ಎಲ್ಲ ಕನ್ನಡಾಭಿಮಾನಿಗಳ ಹಬ್ಬವಾಗಬೇಕು. ಸಮ್ಮೇಳನವನ್ನು ಮುಂದೂಡಿ ನಂತರ ಎಲ್ಲರ ಸಹಭಾಗಿತ್ವದಲ್ಲಿ ನಡೆಸಿದರೆ ಸಂಪೂರ್ಣ ಬೆಂಬಲ ನೀಡುವುದಾಗಿ ಹೇಳಿದರು.

ಪ್ರಸ್ತುತ ನಿರ್ಧಾರದಲ್ಲಿ ಬದಲಾವಣೆ ಆಗದಿದ್ದರೆ ಮುಂದಿನ ಹಂತದ ಹೋರಾಟದ ರೂಪುರೇಷೆ ಪ್ರಕಟಿಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಕಲಾ ಸಂಕುಲ ಸಂಸ್ಥೆಯ ಕಾರ್ಯದರ್ಶಿ ಮಾರುತಿ ಬಡಿಗೇರ್ ಉಪಸ್ಥಿತರಿದ್ದರು.

# ಜಿಲ್ಲೆಗೆ ಮುಂಗಡ ನೀರು ನಿರ್ವಹಣಾ ಯೋಜನೆ ರೂಪಿಸಲು ಅಂಬಾಜಿ ಒತ್ತಾಯ



ರಾಯಚೂರು: ಜಿಲ್ಲೆಯಲ್ಲಿ ಪ್ರಸಕ್ತ ಮಳೆಗಾಲದಲ್ಲಿಯೇ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ರೈತರು, ಕೂಲಿ ಕಾರ್ಮಿಕರು ಹಾಗೂ ಸಾರ್ವಜನಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯ ಆತಂಕವೂ ಹೆಚ್ಚಾಗಿದೆ ಎಂದು ಸಮಾಜ ಸೇವಕ ಅಂಬಾಜಿ ರಾವು ಮೈದರ್ಕರ್ ತಿಳಿಸಿದ್ದಾರೆ.

ನಿರಂತರ ಬಿಸಿಲಿನಿಂದ ಅಂತರ್ಜಲದ ಮೇಲಿನ ಒತ್ತಡ ಹೆಚ್ಚುತ್ತಿದ್ದು, ಇದೇ ಪರಿಸ್ಥಿತಿ ಮುಂದುವರಿದರೆ ಮುಂದಿನ ಬೇಸಿಗೆಯಲ್ಲಿ ಕುಡಿಯುವ ನೀರು, ಕೃಷಿ ಹಾಗೂ ಜಾನುವಾರುಗಳಿಗೆ ಅಗತ್ಯವಾದ ನೀರಿನ ಸಮಸ್ಯೆ ಗಂಭೀರವಾಗುವ ಸಾಧ್ಯತೆ ಇದೆ. ಜೀವನೋಪಾಯದ ಸಮಸ್ಯೆಯಿಂದ ಕೆಲವು ಕುಟುಂಬಗಳು ವಲಸೆ ಹೋಗುವ ಸ್ಥಿತಿಯೂ ನಿರ್ಮಾಣವಾಗುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಜನರು ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾದ ಬಳಿಕ ಪರಿಹಾರ ಹುಡುಕುವುದಕ್ಕಿಂತ ಸಮಸ್ಯೆ ಉಲ್ಬಣಿಸುವ ಮುನ್ನವೇ ಸರ್ಕಾರ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ರಾಯಚೂರು ಜಿಲ್ಲೆಗೆ ವಿಶೇಷ ಆದ್ಯತೆ ನೀಡಿ ಜಿಲ್ಲಾಡಳಿತ ತುರ್ತು ಸಭೆ ಕರೆದು ಮಳೆ ಪ್ರಮಾಣ, ಅಂತರ್ಜಲ ಮಟ್ಟ, ಕುಡಿಯುವ ನೀರಿನ ಲಭ್ಯತೆ, ಜಲಾಶಯಗಳ ಸ್ಥಿತಿ ಹಾಗೂ ಕೃಷಿ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಮಳೆ ಕೊರತೆಯಿಂದ ಎದುರಾಗಬಹುದಾದ ಪರಿಸ್ಥಿತಿಯನ್ನು ಮುಂಚಿತವಾಗಿ ಅಂದಾಜಿಸಿ ಕಾರ್ಯಯೋಜನೆ ರೂಪಿಸಬೇಕು. ಹವಾಮಾನ ಇಲಾಖೆ ಹಾಗೂ ಸಂಬಂಧಿತ ತಜ್ಞರ ವೈಜ್ಞಾನಿಕ ಸಲಹೆ ಪಡೆದು ಕೃತಕ ಮಳೆ (ಕ್ಲೌಡ್ ಸೀಡಿಂಗ್) ಸಾಧ್ಯತೆಯನ್ನೂ ಪರಿಶೀಲಿಸಬೇಕು. ಹವಾಮಾನ ಪರಿಸ್ಥಿತಿ ಅನುಕೂಲಕರವಾಗಿದ್ದಲ್ಲಿ ಅಗತ್ಯ ತಾಂತ್ರಿಕ ಹಾಗೂ ಕಾನೂನು ಅನುಮತಿಗಳನ್ನು ಪಡೆದು ಕೃತಕ ಮಳೆಯ ಪ್ರಯೋಗ ನಡೆಸುವ ಕುರಿತು ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಇದರ ಜೊತೆಗೆ ಜಿಲ್ಲೆಯಲ್ಲಿ ಮಳೆನೀರು ಸಂಗ್ರಹಣೆ, ಕೆರೆ-ಕಟ್ಟೆಗಳ ಸಂರಕ್ಷಣೆ, ಅಂತರ್ಜಲ ಮರುಪೂರಣ, ಕುಡಿಯುವ ನೀರಿನ ಮುಂಗಡ ವ್ಯವಸ್ಥೆ ಹಾಗೂ ಜಾನುವಾರುಗಳಿಗೆ ನೀರು ಒದಗಿಸುವ ಕುರಿತು ತಕ್ಷಣ ಕಾರ್ಯಯೋಜನೆ ರೂಪಿಸಬೇಕು. ಮಳೆ ಕೊರತೆಯಿಂದ ಸಂಕಷ್ಟದಲ್ಲಿರುವ ರೈತರಿಗೆ ಅಗತ್ಯ ನೆರವು ನೀಡಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

ಜಿಲ್ಲೆಯ ಜನಪ್ರತಿನಿಧಿಗಳು ಪಕ್ಷಭೇದ ಮರೆತು ಈ ವಿಚಾರವನ್ನು ಸರ್ಕಾರದ ಗಮನಕ್ಕೆ ತಂದು ಜಿಲ್ಲೆಗೆ ವಿಶೇಷ ನೀರು ನಿರ್ವಹಣಾ ಹಾಗೂ ಬರ ನಿರ್ವಹಣಾ ಯೋಜನೆ ರೂಪಿಸಲು ಒತ್ತಾಯಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

“ಮಳೆ ಬಂದ ನಂತರ ಸಮಸ್ಯೆಗೆ ಪರಿಹಾರ ಹುಡುಕುವುದಕ್ಕಿಂತ, ಮಳೆ ಕೈಕೊಟ್ಟಿರುವಾಗಲೇ ಮುನ್ನೆಚ್ಚರಿಕೆ ವಹಿಸುವುದು ಅಗತ್ಯ. ಇಂದಿನ ನಿರ್ಲಕ್ಷ್ಯ ಮುಂದಿನ ಬೇಸಿಗೆಯಲ್ಲಿ ದೊಡ್ಡ ನೀರಿನ ಸಂಕಷ್ಟಕ್ಕೆ ಕಾರಣವಾಗಬಾರದು” ಎಂದು ಅಂಬಾಜಿ ರಾವು ಮೈದರ್ಕರ್ ತಿಳಿಸಿದ್ದಾರೆ.

ಜಿಲ್ಲಾಡಳಿತ ತಕ್ಷಣ ವಿಶೇಷ ಸಭೆ ಕರೆದು ಮಳೆ ಹಾಗೂ ನೀರಿನ ಪರಿಸ್ಥಿತಿಯನ್ನು ಪರಿಶೀಲಿಸುವುದರ ಜೊತೆಗೆ ಕೃತಕ ಮಳೆಯ ಸಾಧ್ಯತೆಯನ್ನು ತಜ್ಞರ ಮೂಲಕ ಅಧ್ಯಯನ ಮಾಡಿಸಬೇಕು. ಅಂತರ್ಜಲ ಮರುಪೂರಣ, ಮಳೆನೀರು ಸಂಗ್ರಹಣೆ ಮತ್ತು ಶಾಶ್ವತ ನೀರು ನಿರ್ವಹಣೆಗೆ ಆದ್ಯತೆ ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ನಿವೃತ್ತ ಶಿಕ್ಷಕ ಮಲ್ಲನಗೌಡ ಪಾಟೀಲ ನಿಧನ



ಕೊಪ್ಪಳ: ಸಮೀಪದ ಭಾಗ್ಯನಗರ ನಿವಾಸಿ ಹಾಗೂ ನಿವೃತ್ತ ಶಿಕ್ಷಕ ಮಲ್ಲನಗೌಡ ಪಾಟೀಲ (85) ಅವರು ಶನಿವಾರ ನಗರದ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ನಿಧನರಾದರು.

ಮೃತರು ಪತ್ನಿ ಹಾಗೂ ಓರ್ವ ಪುತ್ರರನ್ನು ಅಗಲಿದ್ದಾರೆ. ಅವರು ಎಸ್‌ಎಫ್‌ಎಸ್ ಶಾಲೆಯ ಶಿಕ್ಷಕ ಸಂಗಮೇಶ ಪಾಟೀಲ್ ಅವರ ತಂದೆಯಾಗಿದ್ದರು.

ಮೃತರ ಅಂತ್ಯಕ್ರಿಯೆಯನ್ನು ಕೊಪ್ಪಳ ನಗರದ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

## ಅಮೃತ ವಾಣಿ

ಆತುರ ಗೆಲುವನ್ನು
ಕಸಿಯಬಹುದು ತಾಳ್ಮೆ
ಬದುಕನ್ನು ಗೆಲ್ಲಿಸುತ್ತದೆ.

**1591 ನೇಯ ದಿನಕ್ಕೆ ಏಮ್ಸ್ ಹೋರಾಟ**

# ಭೂಮಾನಂದ ಕೊಲೆ ಪ್ರಕರಣ ಸಿಐಡಿಗೆ ವಹಿಸಲು ಆಗ್ರಹ: ರವೀಂದ್ರನಾಥ್ ಪಟ್ಟಿ



ರಾಯಚೂರು: ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದ ಅವರ ಕೊಲೆ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಬೇಕು ಎಂದು ರಾಯಚೂರು ದಲಿತಪರ ಸಂಘಟನೆಗಳ ಒಕ್ಕೂಟದ ಹಿರಿಯ ಮುಖಂಡ ರವೀಂದ್ರನಾಥ್ ಪಟ್ಟಿ ಆಗ್ರಹಿಸಿದರು. ಭೂಮಾನಂದ ಪ್ರಕರಣದ ಜೊತೆಗೆ ಅಶ್ವಿನಿ ಹಾಗೂ ರಾಣೆಮ್ಮ ಅವರ ಕೊಲೆ ಪ್ರಕರಣಗಳನ್ನೂ ಸಿಐಡಿಗೆ ವಹಿಸುವಂತೆ ದಲಿತಪರ ಸಂಘಟನೆಗಳು ನಿರಂತರವಾಗಿ ಒತ್ತಾಯಿಸುತ್ತಿವೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬೇಡಿಕೆ ಕುರಿತು ತಮ್ಮ ನೇತೃತ್ವದ ಸಂಘಟನೆಗಳ ಮುಖಂಡರು ಸೆ.17ರಂದು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ ಎಂದು ತಿಳಿಸಿದರು. ಡಾ. ಅಜಯ್ ಸಿಂಗ್ ಪ್ರಸ್ತುತ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾರೆ.

ಭೂಮಾನಂದ ಕೊಲೆ ಪ್ರಕರಣದಲ್ಲಿ ಈಗಾಗಲೇ ಹಲವು ಆರೋಪಿಗಳನ್ನು ಬಂಧಿಸಲಾಗಿದ್ದು, ಇನ್ನೂ ಕೆಲವು ಆರೋಪಿಗಳ ಬಂಧನ ಬಾಕಿಯಿದೆ. ಮೂರು ಕೊಲೆ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸುವಂತೆ ಈ ಹಿಂದೆಯೂ ಮನವಿ ಮಾಡಲಾಗಿದ್ದರೂ ಸೂಕ್ತ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅವರು ಆರೋಪಿಸಿದರು. ಭೂಮಾನಂದ, ಅಶ್ವಿನಿ ಹಾಗೂ ರಾಣೆಮ್ಮ ಪ್ರಕರಣಗಳ ನಿಷ್ಪಕ್ಷಪಾತ ತನಿಖೆಗೆ ವಿವಿಧ ದಲಿತಪರ ಸಂಘಟನೆಗಳು ಈ ಹಿಂದೆಯೂ ಆಗ್ರಹಿಸಿದ್ದವು.

ಪ್ರಕರಣಗಳನ್ನು ಶೀಘ್ರ ಸಿಐಡಿಗೆ ವಹಿಸದಿದ್ದರೆ ಅನಿರ್ದಿಷ್ಟಾವಧಿ ಪ್ರತಿಭಟನೆ, ರಾಯಚೂರು ಬಂದ್, ರಾಜ್ಯಾದ್ಯಂತ ರಸ್ತೆ ತಡೆ ಹಾಗೂ ಬೆಂಗಳೂರು ಚಲೋ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ರವೀಂದ್ರನಾಥ್ ಪಟ್ಟಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್. ಮಾರೆಪ್ಪ, ಎಂ.ಆರ್. ಭೇರಿ, ಜೈ ಭೀಮ್ ವಲ್ಲಭ, ಬಸವರಾಜ್ ಭಂಡಾರಿ, ಶರಣಪ್ಪ ದಿನ್ನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನೈಸ್ ಭೂಮಿ ರೈತರಿಗೆ ಮರಳಿಸಲು ಆಗ್ರಹಿಸಿ ಸಿಪಿಐಎಂ ಪ್ರತಿಭಟನೆ




ರಾಯಚೂರು: ನೈಸ್ ಯೋಜನೆಗೆ ಸಂಬಂಧಿಸಿದ ಭೂಮಿಯನ್ನು ರೈತರಿಗೆ ವಾಪಸ್ ನೀಡಬೇಕು, ಟೋಲ್ ಸಂಗ್ರಹವನ್ನು ನಿಲ್ಲಿಸಬೇಕು ಹಾಗೂ ಹೋರಾಟಗಾರರ ಬಂಧನವನ್ನು ಖಂಡಿಸಿ ಸಿಪಿಐಎಂ ರಾಯಚೂರು ತಾಲೂಕು ಸಮಿತಿ ವತಿಯಿಂದ ಸೆ.18ರಂದು ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಕೆ.ಜಿ. ವೀರೇಶ, ಜುಲೈ 29ರಂದು ಕರ್ನಾಟಕ ಹೈಕೋರ್ಟ್ ನೈಸ್ ಯೋಜನೆಗೆ ಸಂಬಂಧಿಸಿದ ಭೂಮಿಯನ್ನು ರೈತರಿಗೆ ಹಿಂದಿರುಗಿಸುವುದು ಹಾಗೂ ಟೋಲ್ ಸಂಗ್ರಹಕ್ಕೆ ಸಂಬಂಧಿಸಿ ಆದೇಶ ನೀಡಿದೆ ಎಂದು ಪ್ರತಿಭಟನಾಕಾರರು ಹೇಳಿದ್ದು, ಆ ಆದೇಶವನ್ನು ರಾಜ್ಯ ಸರ್ಕಾರ ಕೂಡಲೇ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ನ್ಯಾಯಾಲಯದ ಆದೇಶ ಜಾರಿಗೊಳಿಸುವಂತೆ ಒತ್ತಾಯಿಸಿ ಹೋರಾಟ ನಡೆಸುತ್ತಿರುವ ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯಾಧ್ಯಕ್ಷ ಯು. ಬಸವರಾಜ, ಪ್ರಧಾನ ಕಾರ್ಯದರ್ಶಿ ಯಶವಂತ, ಮುಖಂಡರಾದ ವೆಂಕಟಾಚಲಯ್ಯ, ಮಹಾಂತೇಶ ಸೇರಿದಂತೆ ಹಲವರ ವಿರುದ್ಧ ಬಂಧನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಆರೋಪಿಸಿದರು. ರೈತರು ಹಾಗೂ ಕಾರ್ಮಿಕ ಸಂಘಟನೆಗಳ ಹೋರಾಟವನ್ನು ದಮನಿಸುವ ಬದಲು ಸರ್ಕಾರ ಅವರ ಬೇಡಿಕೆಗಳನ್ನು ಆಲಿಸಬೇಕು ಎಂದು ಹೇಳಿದರು.

ಫ್ರೀಡಂ ಪಾರ್ಕ್ ಹೊರತುಪಡಿಸಿ ಬೇರೆಡೆ ಪ್ರತಿಭಟನೆ ನಡೆಸಲು ಅವಕಾಶ ನೀಡದಿರುವುದನ್ನು ಪ್ರಶ್ನಿಸಿದ ಅವರು, ಪ್ರಜಾಸತ್ತಾತ್ಮಕ ಪ್ರತಿಭಟನೆಗಳಿಗೆ ಅವಕಾಶ ಕಲ್ಪಿಸಬೇಕು. ಬಂಧಿತರನ್ನು ಕೂಡಲೇ ಬಿಡುಗಡೆ ಮಾಡಬೇಕು ಹಾಗೂ ನೈಸ್ ಯೋಜನೆಗೆ ಸಂಬಂಧಿಸಿದ ನ್ಯಾಯಾಲಯದ ಆದೇಶವನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ನೈಸ್ ಕಂಪನಿಗೆ ಸಂಬಂಧಿಸಿದ ಭೂಮಿಯನ್ನು ರೈತರಿಗೆ ಮರಳಿಸುವುದು ಹಾಗೂ ಟೋಲ್ ಸಂಗ್ರಹದ ಕುರಿತು ನ್ಯಾಯಾಲಯದ ಆದೇಶದಂತೆ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಹೆಚ್. ಪದ್ಮಾ, ಡಿ.ಎಸ್. ಶರಣಬಸವ, ಕರಿಯಪ್ಪ ಅಚ್ಚೋಳಿ, ಈರಂಗನಗೌಡ, ಜಿಲಾನಿ ಪಾಷಾ, ಗೋಕಾರಮ್ಮ, ರಹೀಮತ್ ಬೇಗಂ, ಆಸ್ಮಾ, ಭಾಗ್ಯಮ್ಮ, ವೆಂಕಟಮ್ಮ, ವೆಂಕಟ ನರಸಮ್ಮ, ಶರಣಮ್ಮ, ರಾಮಪ್ಪ, ಕುಮಾರ್ ಜಲಾಲನಗರ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಭಾರತೀಯರ ತಲಾ ಆದಾಯ ಹೆಚ್ಚಿಸಲು ಉತ್ಪಾದಕತೆಯೇ ಮೂಲಮಂತ್ರ: ಡಾ. ಶ್ಯಾಲೆ ಚನ್ನಬಸವ

ರಾಯಚೂರು: ಅಮೆರಿಕ ಸೇರಿದಂತೆ ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಮಟ್ಟಕ್ಕೆ ಭಾರತೀಯರ ತಲಾ ಆದಾಯವನ್ನು ಕೊಂಡೊಯ್ಯಬೇಕಾದರೆ ಕೇವಲ ವೇತನ ಹೆಚ್ಚಳಕ್ಕೆ ಸೀಮಿತವಾಗದೆ, ಉತ್ಪಾದಕತೆ, ಕೌಶಲ್ಯ, ಉದ್ಯೋಗದ ಗುಣಮಟ್ಟ ಹಾಗೂ ಉದ್ಯಮಗಳ ಮೌಲ್ಯವರ್ಧನೆ ಹೆಚ್ಚಿಸುವ ದೀರ್ಘಕಾಲೀನ ಆರ್ಥಿಕ ಕಾರ್ಯತಂತ್ರ ರೂಪಿಸಬೇಕಾಗಿದೆ ಎಂದು ಡಾ. ಶ್ಯಾಲೆ ಚನ್ನಬಸವ ಅಭಿಪ್ರಾಯಪಟ್ಟಿದ್ದಾರೆ.

ಅಭಿವೃದ್ಧಿ ಹೊಂದಿದ ಹಲವು ರಾಷ್ಟ್ರಗಳಲ್ಲಿ ತಲಾ ಆದಾಯ ಭಾರತಕ್ಕಿಂತ ಬಹಳ ಹೆಚ್ಚಿದ್ದು, ಅವು ಕೃಷಿ ಆಧಾರಿತ ಆರ್ಥಿಕತೆಯಿಂದ ತಂತ್ರಜ್ಞಾನ, ಕೈಗಾರಿಕೆ, ಉತ್ಪಾದನೆ ಮತ್ತು ರಫ್ತು ಆಧಾರಿತ ಆರ್ಥಿಕತೆಯತ್ತ ಕ್ರಮೇಣ ಪರಿವರ್ತನೆಗೊಂಡಿರುವುದೇ ಪ್ರಮುಖ ಕಾರಣವಾಗಿದೆ. ಭಾರತವೂ ಇದೇ ದಿಕ್ಕಿನಲ್ಲಿ ವೇಗವಾಗಿ ಸಾಗುವುದು ಅಗತ್ಯ ಎಂದು ತಿಳಿಸಿದ್ದಾರೆ.

ಕಡಿಮೆ ಉತ್ಪಾದಕತೆಯ ಕೃಷಿ ಹಾಗೂ ಅನೌಪಚಾರಿಕ ಉದ್ಯೋಗಗಳಲ್ಲಿ ತೊಡಗಿರುವ ಕಾರ್ಮಿಕರನ್ನು ಹೆಚ್ಚಿನ ಉತ್ಪಾದಕತೆಯ ಕೈಗಾರಿಕೆ, ತಂತ್ರಜ್ಞಾನ, ಹಣಕಾಸು, ಆರೋಗ್ಯ, ಶಿಕ್ಷಣ ಹಾಗೂ ವೃತ್ತಿಪರ ಸೇವೆಗಳತ್ತ ಕೊಂಡೊಯ್ಯಬೇಕು. ಎಲೆಕ್ಟ್ರಾನಿಕ್ಸ್, ವಾಹನೋದ್ಯಮ, ಎಲೆಕ್ಟ್ರಿಕ್ ವಾಹನ, ಬ್ಯಾಟರಿ, ಔಷಧ, ಯಂತ್ರೋಪಕರಣ, ರಕ್ಷಣಾ ಉತ್ಪಾದನೆ ಮತ್ತು ಆಹಾರ ಸಂಸ್ಕರಣೆ ಕ್ಷೇತ್ರಗಳಲ್ಲಿ ದೊಡ್ಡ ಪ್ರಮಾಣದ ಹೂಡಿಕೆಯನ್ನು ಆಕರ್ಷಿಸಬೇಕಾಗಿದೆ ಎಂದು ಹೇಳಿದ್ದಾರೆ.

ಕೃತಕ ಬುದ್ಧಿಮತ್ತೆ, ಸಾಫ್ಟ್‌ವೇರ್, ಎಂಜಿನಿಯರಿಂಗ್, ಲೆಕ್ಕಪತ್ರ, ವಿನ್ಯಾಸ, ವೈದ್ಯಕೀಯ ಮತ್ತು ಹಣಕಾಸು ಸೇವೆಗಳನ್ನು ಜಾಗತಿಕ ಮಾರುಕಟ್ಟೆಗೆ ರಫ್ತು ಮಾಡುವ ಸಾಮರ್ಥ್ಯವನ್ನು ವಿಸ್ತರಿಸಬೇಕು. ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಸುಲಭ ಸಾಲ, ತಂತ್ರಜ್ಞಾನ, ತರಬೇತಿ, ಡಿಜಿಟಲ್ ಮಾರುಕಟ್ಟೆ ಹಾಗೂ ರಫ್ತು ಅವಕಾಶಗಳನ್ನು ಒದಗಿಸಿ ಅವು ದೊಡ್ಡ ಉದ್ಯಮಗಳಾಗಿ ಬೆಳೆಯುವ ವಾತಾವರಣ ನಿರ್ಮಿಸಬೇಕು ಎಂದು ಸಲಹೆ ನೀಡಿದ್ದಾರೆ.

ಉದ್ಯೋಗ ಮಾರುಕಟ್ಟೆಯ ಅಗತ್ಯಕ್ಕೆ ಅನುಗುಣವಾಗಿ ಕೌಶಲ್ಯ ತರಬೇತಿ, ಅಪ್ರೆಂಟಿಸ್‌ಶಿಪ್ ಹಾಗೂ ಪುನರ್‌ಕೌಶಲ್ಯಾಭಿವೃದ್ಧಿಗೆ ಆದ್ಯತೆ ನೀಡಬೇಕು. ಕೃಷಿಯಲ್ಲಿ ನೀರಾವರಿ, ಯಾಂತ್ರೀಕರಣ, ಸಂಗ್ರಹಣೆ, ರೈತ ಉತ್ಪಾದಕ ಸಂಘಟನೆಗಳು, ಆಹಾರ ಸಂಸ್ಕರಣೆ ಮತ್ತು ನೇರ ಮಾರುಕಟ್ಟೆ ವ್ಯವಸ್ಥೆಯನ್ನು ಬಲಪಡಿಸುವ ಮೂಲಕ ರೈತರ ಆದಾಯ ಹೆಚ್ಚಿಸಬಹುದು ಎಂದು ತಿಳಿಸಿದ್ದಾರೆ.

ಗುಣಮಟ್ಟದ ವಿದ್ಯುತ್, ರಸ್ತೆ, ರೈಲು, ಬಂದರು, ಲಾಜಿಸ್ಟಿಕ್ಸ್, ವೇಗದ ಇಂಟರ್‌ನೆಟ್ ಹಾಗೂ ಯೋಜಿತ ನಗರೀಕರಣವೂ ಆರ್ಥಿಕ ಬೆಳವಣಿಗೆಗೆ ಪೂರಕವಾಗಬೇಕು. ಮಹಿಳೆಯರ ಉದ್ಯೋಗ ಪಾಲ್ಗೊಳ್ಳುವಿಕೆ ಹೆಚ್ಚಿಸುವುದರಿಂದ ಕುಟುಂಬಗಳ ಆದಾಯವೂ ವೃದ್ಧಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಉದ್ಯಮ ಆರಂಭ ಮತ್ತು ವಿಸ್ತರಣೆಗೆ ವೇಗವಾದ ಅನುಮತಿ ವ್ಯವಸ್ಥೆ, ಸರಳ ತೆರಿಗೆ ಮತ್ತು ಅನುಸರಣೆ ಪ್ರಕ್ರಿಯೆ, ಸ್ಥಿರ ನಿಯಮಗಳು ಹಾಗೂ ಉದ್ಯಮ ಆರಂಭಮುಕ್ತಾಯಕ್ಕೆ ಸುಗಮ ವ್ಯವಸ್ಥೆ ರೂಪಿಸಬೇಕಾಗಿದೆ. ಕಡಿಮೆ ಉತ್ಪಾದಕತೆಯ ಕೆಲಸದಿಂದ ಕೌಶಲ್ಯಾಧಾರಿತ ಹೆಚ್ಚಿನ ಉತ್ಪಾದಕತೆಯ ಉದ್ಯೋಗಗಳಿಗೆ ಜನರನ್ನು ವರ್ಗಾಯಿಸಿ, ಜಾಗತಿಕ ರಫ್ತು ಮೂಲಕ ಹೆಚ್ಚಿನ ಆದಾಯ ಸೃಷ್ಟಿಸುವ ಆರ್ಥಿಕ ಸರಪಳಿ ನಿರ್ಮಿಸುವುದು ಮುಖ್ಯ ಗುರಿಯಾಗಬೇಕು ಎಂದು ಹೇಳಿದ್ದಾರೆ.

ಈ ಬೃಹತ್ ಪರಿವರ್ತನೆಗೆ ಅಗತ್ಯವಿರುವ ಹಣವನ್ನು ಸರ್ಕಾರದ ಬಜೆಟ್‌ನಿಂದ ಮಾತ್ರ ಒದಗಿಸುವ ಅಗತ್ಯವಿಲ್ಲ. ಸರ್ಕಾರದ ಬಂಡವಾಳ ವೆಚ್ಚ, ಆಸ್ತಿ ಹಣೀಕರಣ, ಖಾಸಗಿ ಹೂಡಿಕೆ, ಸಾರ್ವಜನಿಕ ಖಾಸಗಿ ಸಹಭಾಗಿತ್ವ, ಬ್ಯಾಂಕ್ ಹಾಗೂ ಅಭಿವೃದ್ಧಿ ಹಣಕಾಸು ಸಂಸ್ಥೆಗಳ ದೀರ್ಘಾವಧಿ ಸಾಲ, ವಿದೇಶಿ ನೇರ ಹೂಡಿಕೆ, ಪಿಂಚಣಿ ಮತ್ತು ವಿಮಾ ನಿಧಿಗಳು, ಬಾಂಡ್‌ಗಳು ಹಾಗೂ ಮೂಲಸೌಕರ್ಯ ಹೂಡಿಕೆ ಸಾಧನಗಳ ಮೂಲಕ ಬಂಡವಾಳ ಸಂಗ್ರಹಿಸಬಹುದು ಎಂದು ತಿಳಿಸಿದ್ದಾರೆ.

ಸರ್ಕಾರದ ಹೂಡಿಕೆ ಖಾಸಗಿ ಬಂಡವಾಳವನ್ನು ಸೆಳೆಯುವ ರೀತಿಯಲ್ಲಿ ರೂಪುಗೊಳ್ಳಬೇಕು. ಹೂಡಿಕೆಗಳಿಂದ ಉತ್ಪಾದಕತೆ ಹೆಚ್ಚಳ, ಹೊಸ ಉದ್ಯಮಗಳ ಸ್ಥಾಪನೆ, ಉದ್ಯೋಗ ಸೃಷ್ಟಿ, ಹೆಚ್ಚಿನ ವೇತನ, ತೆರಿಗೆ ಆದಾಯ ವೃದ್ಧಿ ಹಾಗೂ ಮರುಹೂಡಿಕೆಯಂತಹ ನಿರಂತರ ಆರ್ಥಿಕ ಚಕ್ರ ನಿರ್ಮಿಸಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ಚುನಾಯಿತ ಸಂಸ್ಥೆಗಳು, ಕೈಗಾರಿಕೆಗಳು, ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ಒಟ್ಟಾಗಿ ದೀರ್ಘಕಾಲೀನ ದೃಷ್ಟಿಕೋನದೊಂದಿಗೆ ಕಾರ್ಯನಿರ್ವಹಿಸಿದರೆ ಯುವಕರು, ಮಹಿಳೆಯರು ಹಾಗೂ ನಿರುದ್ಯೋಗಿಗಳಿಗೆ ಹೆಚ್ಚಿನ ಆದಾಯದ ಅವಕಾಶಗಳು ಸೃಷ್ಟಿಯಾಗಲಿದ್ದು, ದೇಶದ ಒಟ್ಟಾರೆ ಆರ್ಥಿಕ ಬೆಳವಣಿಗೆಯೂ ವೇಗ ಪಡೆಯಲಿದೆ ಎಂದು ಡಾ. ಶ್ಯಾಲೆ ಚನ್ನಬಸವ ತಿಳಿಸಿದ್ದಾರೆ.

## ಮೊದಲನೇ ಪುಟದಿಂದ

# ಪ್ರತಿಯೊಂದು ಮನವಿಯನ್ನು ಕೂಲಂಕುಷವಾಗಿ ಪರಿಶೀಲಿಸಿ, ತ್ವರಿತವಾಗಿ ಪರಿಹರಿಸಲಾಗುವುದು: ಜಿಲ್ಲಾಧಿಕಾರಿ ಪೂವಿತಾ ಎಸ್

ಲಿಂಗಸುಗೂರು ತಾಲೂಕು ವ್ಯಾಪ್ತಿಯಲ್ಲಿ ತೀವ್ರ ಬರಗಾಲ ಆವರಿಸಿದ್ದು, ಈಗಾಗಲೇ ಸರಕಾರದಿಂದ ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆಯಾಗಿದೆ. ಬರ ಪರಿಹಾರಕ್ಕಾಗಿ ಬೆಳೆ ಕಟಾವು ಪ್ರಯೋಗಗಳು ಹಾಗೂ ಇತರ ಸಂಬಧಿತ ಪರಿಹಾರ ಕಾರ್ಯಗಳನ್ನು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ನಡೆಯುತ್ತಿವೆ ಎಂದು ತಿಳಿಸಿದರು.

ಲಿಂಗಸುಗೂರು ಭಾಗದಲ್ಲಿ ಅರಣ್ಯ ಇಲಾಖೆ, ಕಂದಾಯ ಇಲಾಖೆ, ಆರ್‌ಡಿಪಿಆರ್ ,ಪೊಲೀಸ್ ಇಲಾಖೆ, ವಿದ್ಯಾರ್ಥಿನಿಲಯಗಳು ಸೇರಿದಂತೆ ವಿವಿಧ ಹಲವು ಇಲಾಖೆಗಳಿಗೆ ಸಂಬಧಿಸಿದತೆ ಸಾರ್ವಜನಿಕ ಮತ್ತು ವೈಯಕ್ತಿಕ ಸಮಸ್ಯೆಗಳು ಹೆಚ್ಚಿನ ಸಂಖ್ಯೆಯಲ್ಲಿವೆ. ಪ್ರತಿಯೊಂದು ಸಮಸ್ಯೆಯನ್ನು ಸಾರ್ವಜನಿಕರು ಈ ಆಂದೋಲನ ಕಾರ್ಯಕ್ರಮದ ಮೂಲಕ ನಮಗೆ ಸಲ್ಲಿಸಬೇಕು ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಈ ಹಿಂದೆ ಮಾನ್ವಿ ತಾಲೂಕಿನಲ್ಲಿ ಅಭಿಯಾನ ನಡೆಸಿದ ನಂತರ, ಇಂದು ಜಿಲ್ಲಾ ಮತ್ತು ತಾಲೂಕು ಮಟ್ಟದ ಎಲ್ಲಾ ಉನ್ನತಾಧಿಕಾರಿಗಳು ಲಿಂಗಸುಗೂರು ತಾಲೂಕಿನಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲು ಮತ್ತು ಸಮಸ್ಯೆಗಳಿಗೆ ಸ್ಪಂದಿಸಲು ಆಗಮಿಸಿದ್ದಾರೆ. ಲಿಂಗಸುಗೂರು ತಾಲೂಕಿನಲ್ಲಿ ಒಟ್ಟು 30 ಗ್ರಾಮ ಪಂಚಾಯಿತಿಗಳಿದ್ದು, ದೇಶ ಪ್ರಸಿದ್ಧ ಹಟ್ಟಿ ಚಿನ್ನದ ಗಣಿ ಹಾಗೂ ಜಲಧಾರೆ ಯೋಜನೆಯ ಮುಖ್ಯ ಘಟಕಗಳು ಇಲ್ಲಿ ಕಾರ್ಯನಿರ್ವಹಿಸುತ್ತಿವೆ. ಜಲಧಾರೆ ಯೋಜನೆಯಡಿ ಜಿಲ್ಲೆಯ 1,400ಕ್ಕೂ ಹೆಚ್ಚು ವಸತಿ ಪ್ರದೇಶಗಳು ಮತ್ತು 7 ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರು ಪೂರೈಸುವ 'ಡಬ್ಲ್ಯೂಟಿಪಿ' ಮತ್ತು ಮುಖ್ಯ ಮೂಲಗಳು ಲಿಂಗಸುಗೂರಿನಲ್ಲಿವೆ ಎಂದರು.

ತಾಲೂಕಿನಲ್ಲಿ ಆರೋಗ್ಯ, ಅಪೌಷ್ಟಿಕತೆ ಮತ್ತು ಕುಡಿಯುವ ನೀರಿನ ಸಮಸ್ಯೆಗಳು ಹೆಚಾಗಿವೆ. ಅದರಲ್ಲೂ ವಿಶೇಷವಾಗಿ ಈ ಬಾರಿ ಮಳೆ ಅಭಾವದಿಂದ ಬರ ಪೀಡಿತ ಪರಿಸ್ಥಿತಿ ನಿರ್ಮಾಣವಾಗಿದ್ದು, ಪಂಚಾಯಿತಿ ಮಟ್ಟದಲ್ಲಿ ಪರಿಶೀಲಿಸಿದಾಗ ಹಲವಾರು ಸಮಸ್ಯೆಗಳು ಬೆಳಕಿಗೆ ಬಂದಿವೆ. ಸಾರ್ವಜನಿಕರ ಅರ್ಜಿಗಳು ಮತ್ತು ಕುಂದುಕೊರತೆಗಳನ್ನು ಸ್ವೀಕರಿಸಲು ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಲಾಗಿದೆ. ಸಾರ್ವಜನಿಕರು ಸಲ್ಲಿಸುವ ಪ್ರತಿಯೊಂದು ಅಹವಾಲನ್ನು ಗಂಭೀರವಾಗಿ ಪರಿಗಣಿಸಿ, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲೇ ಪರಿಹರಿಸಬಹುದಾದ ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸಲಾಗುವುದು. ಸರ್ಕಾರದ ಮಟ್ಟದಲ್ಲಿ ಬಗೆಹರಿಯಬೇಕಾದ ವಿಷಯಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಶೀಘ್ರವಾಗಿ ಇತ್ಯರ್ಥಪಡಿಸಲಾಗುವುದು ಎಂದರು.

ಈ ವೇಳೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಮಾತನಾಡಿ, ಸರ್ಕಾರ ಎಂದರೆ ಕೇವಲ ಒಂದೆಡೆ ಕುಳಿತು ಅಧಿಕಾರ ನಡೆಸುವುದಲ್ಲ, ಬದಲಾಗಿ ಜನರ ಕುಂದುಕೊರತೆಗಳನ್ನು ಆಲಿಸಿ, ಅವರ ಆಶೋತ್ತರಗಳನ್ನು ಈಡೇರಿಸುವುದು ಮುಖ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಜನರ ಸಮಸ್ಯೆಗೆ ಮನೆಬಾಗಿಲಲ್ಲೇ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ 'ಪ್ರಜಾಸೇವಾ' ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ ಎಂದರು.

1ನೇ ಮತ್ತು 3ನೇ ಶನಿವಾರ ದಂದು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳ ಸಮನ್ವಯದೊಂದಿಗೆ ಆಯಾ ಹೋಬಳಿಗಳಲ್ಲಿ ಈ ಕಾರ್ಯಕ್ರಮ ನಡೆಯಲಿದೆ. ಮಂಗಳೂರಿನಲ್ಲಿ ಸಚಿವ ಸಂಪುಟ ಕಾರ್ಯಕ್ರಮ ಇರುವ ಕಾರಣ ಜಿಲ್ಲಾ ಉಸ್ತುವಾರಿ ಸಚಿವರು ಬಂದಿರುವುದಿಲ್ಲ.

2ನೇ ಮತ್ತು 4ನೇ ಶನಿವಾರ ದಂದು ಆಯಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಅಧಿಕಾರಿಗಳನ್ನೊಳಗೊಂಡು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ ಎಂದರು.

ಸಾರ್ವಜನಿಕರು ದೀರ್ಘಕಾಲದಿಂದ ಬಗೆಹರಿಯದೆ ಉಳಿದಿರುವ ತಮ್ಮ ವಿವಿಧ ಇಲಾಖೆಗಳ ಕುಂದುಕೊರತೆಗಳು ಹಾಗೂ ಸಮಸ್ಯೆಗಳ ಕುರಿತು ಕೌಂಟರ್‌ಗಳಲ್ಲಿ ಅಹವಾಲುಗಳನ್ನು/ಅರ್ಜಿಗಳನ್ನು ಸಲ್ಲಿಸಿ, ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು. ಸ್ಥಳದಲ್ಲೇ ನಿರ್ಧಾರ ಕೈಗೊಳ್ಳಲು ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಉನ್ನತಾಧಿಕಾರಿಗಳು ಕಾರ್ಯಕ್ರಮದಲ್ಲಿ ಇರಲಿದ್ದಾರೆ ಎಂದರು.

ರೈತರಿಗೆ ವಿವಿಧ ಕೃಷಿ ಸಲಕರಣೆಗಳ ವಿತರಣೆ: ಪ್ರಜಾಸೇವಾ ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯಿಂದ ಅರ್ಹ ರೈತರಿಗೆ ಕ್ರಿಮಿ ನಾಶಕ ಸಿಂಪಡಿಸುವ ಮಿಷನ್, ಹೊಲ ಬಿತ್ತನೆ ಸಾಮಾಗ್ರಿಗಳು, ರೂಟ್ರ್ ನೀರಿನ ಪೈಪ್ ಸೇರಿದಂತೆ ವಿವಿಧ ಸಲಕರಣೆಗಳನ್ನು ವಿತರಣೆ ಮಾಡಲಾಯಿತು. ಇದಕ್ಕೂ ಮುಂಚೆ ವೇದಿಕೆ ಮೇಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಂದಾಯ ಇಲಾಖೆಯ ವಿವಿಧ ಯೋಜನೆಯಡಿಯಲ್ಲಿ ಅರ್ಹ ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ವಿವಿಧ ಮಳಿಗೆಗೆ ಚಾಲನೆ: ಲಿಂಗಸುಗೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಪ್ರಜಾಸೇವಾ ಆಂದೋಲನ ಸಭೆಯ ಅಂಗವಾಗಿ ವಿವಿಧ ಇಲಾಖೆಯಗಳ ಸಹಯೋಗದೊಂದಿಗೆ ಸ್ಥಾಪಿಸಲಾಗಿದ್ದ ವಿವಿಧ ಮಳಿಗೆಗಳಿಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಭೇಟಿ ನೀಡಿದರು.

ವಿವಿಧ ಇಲಾಖೆಗಳಾದ ಆಹಾರ, ಆಗ್ನಿ ಶಾಮಕದಳ, ಕೃಷಿ ಇಲಾಖೆ, ಅರಣ್ಯ ಇಲಾಖೆ, ಪಂಚಾಯತ್ ರಾಜ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಪ್ರಧಾನ ಮಂತ್ರಿ ಗ್ರಾಮ್ ಸಡಕ್ ಯೋಜನೆ, ಆರೋಗ್ಯ ಇಲಾಖೆ, ತೋಟಗಾರಿಕೆ ಇಲಾಖೆ, ಖಜಾನೆ, ಅಬಕಾರಿ ಇಲಾಖೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ಪಶುಪಾಲನೆ ಇಲಾಖೆ, ರೇಷ್ಮೆ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಯುವನಿಧಿ, ಉಪ ನೋಂದಣಿ ಕಚೇರಿ ಲಿಂಗಸುಗೂರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಭೂಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಂದ ಮಳಿಗೆಗಳನ್ನು ಸ್ಥಾಪಿಸಿ, ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲ ಸಿದ್ದಪ್ಪ ಪೂಜಾರಿ, ಲಿಂಗಸುಗೂರು ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುರ್ಮಾ, ಲಿಂಗಸುಗೂರು ತಹಶಿಲ್ದಾರ್ ಸತ್ಯಮ್ಮ, ಆಹಾರ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹಮದ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್., ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ವೆಂಕಟೇಶ ಗುತ್ತೇದಾರ, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಜಿ., ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ, ಅಬಕಾರಿ ಇಲಾಖೆಯ ಉಪ ನಿರೀಕ್ಷಕಿ ಲಕ್ಷ್ಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ ಸರಸ್ವತಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿ, ಸಿಬ್ಬಂದಿಗಳು ಹಾಗೂ ಲಿಂಗಸುಗೂರಿನ ಪಟ್ಟಣದ ಸಾರ್ವಜನಿಕರು ಉಪಸ್ಥಿತರಿದ್ದರು.

# ಪ್ರಜಾ ಸೇವೆ: ಜನರ ಅಹವಾಲುಗಳಿಗೆ ಸ್ಥಳದಲ್ಲೇ ಸ್ಪಂದನೆ

ಫಲಾನುಭವಿಗಳಿಗೆ ಸುಲಭವಾಗಿ ತಲುಪಬೇಕು. ಗ್ರಾಮೀಣ ಪ್ರದೇಶದ ಜನರಿಗೆ ಸರ್ಕಾರಿ ಸೇವೆ ಪಡೆಯುವಲ್ಲಿ ಎದುರಾಗುವ ತೊಂದರೆಗಳನ್ನು ಕಡಿಮೆ ಮಾಡಿ, ಆಡಳಿತ ವ್ಯವಸ್ಥೆಯನ್ನು ಜನಸ್ನೇಹಿಯಾಗಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ತಿಳಿಸಿದರು.

ಗಿಲ್ಲೆಸುಗೂರಿನಲ್ಲಿ ನಡೆದ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಮುಂದೆ ಮಂಡಿಸಿದ ಸಾರ್ವಜನಿಕರಿಗೆ ಶಾಸಕರು ಧನ್ಯವಾದ ಸಲ್ಲಿಸಿದರು.

# ಶಿಕ್ಷಕರ ಸೇವೆಗೆ ಸರಿಸಾಟಿಯಾದ ಸೇವೆ ಮತ್ತೊಂದಿಲ್ಲ: ಎನ್.ಎಸ್. ಬೋಸರಾಜು

ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ಬಳಿಕ ಉತ್ತಮ ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಆಲ್ ಕರೀಮ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಜರತ್ ಶಾ ಖಾಜಾ ಬಹುದ್ದೀನ್ ಫಾರೂಕ್ ಸಾಬ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ. ಶಾಂತಪ್ಪ, ಮೊಹಮ್ಮದ್ ಶಾಲಂ, ಅಕ್ಬರ್ ಸಾಬ್, ಬಶೀರುದ್ದೀನ್, ಅಸ್ಲಾಂ ಪಾಷಾ, ಸಾಜೀದ್ ಸಮೀರ್, ರಜಾಕ್ ಉಸ್ತಾದ್, ರಾಮಾಂಜನಯ್ಯಲು, ಜಿ. ಶಿವಮೂರ್ತಿ, ಜಯಂತರಾವ್ ಪತಂಗೆ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಟ್ರ್ಯಾಕ್ಟರ್ ಅಪಘಾತ: ಇಬ್ಬರು ಬಾಲಕರು ಸಾವು, ಮತ್ತೊಬ್ಬ ಗಂಭೀರ

ಆಸ್ಪತ್ರೆಗೆ ಸಾಗಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಇಬ್ಬರೂ ಮೃತಪಟ್ಟಿದ್ದಾರೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ರಿಮ್ಸ್ ಆಸ್ಪತ್ರೆಯ ಶವಾಗಾರಕ್ಕೆ ಕಳುಹಿಸಲಾಗಿದೆ.

ಘಟನೆ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಅಪಘಾತದ ನಿಖರ ಕಾರಣ ಕುರಿತು ತನಿಖೆ ಮುಂದುವರಿದಿದೆ. ರಾಯಚೂರು ನಗರ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗಣೇಶ ವಿಸರ್ಜನೆ ಮೆರವಣಿಗೆಯ ಸಂಭ್ರಮದ ನಡುವೆ ನಡೆದ ಈ ದುರಂತದಿಂದ ಸ್ಥಳೀಯರಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ.

# ಮಹಿಳೆ ಮೇಲೆ ಕಲ್ಲಿನಿಂದ ಹಲ್ಲೆ: ಚಿಕಿತ್ಸೆ ಫಲಿಸದೆ ಸಾವು, ಇಬ್ಬರು ವಶಕ್ಕೆ

ಫಲಿಸದೆ ಅವರು ಮೃತಪಟ್ಟಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ನೇಹಾ ಅವರ ಪತಿ ಅಮಿತ್ ಹಾಗೂ ಮತ್ತೊಬ್ಬ ವ್ಯಕ್ತಿ ಶುಭಂ ಅವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಹತ್ಯೆಗೆ ನಿಖರ ಕಾರಣ ಏನು ಹಾಗೂ ಕೃತ್ಯದಲ್ಲಿ ಯಾರ ಪಾತ್ರವಿದೆ ಎಂಬುದರ ಕುರಿತು ತನಿಖೆ ಮುಂದುವರಿದಿದೆ.

ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸಿಂಧನೂರು ತಾಲೂಕು ಆಸ್ಪತ್ರೆಗೆ ರವಾನಿಸಲಾಗಿದ್ದು, ಸಿಂಧನೂರು ಗ್ರಾಮೀಣ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

# ವಿಮೋಚನಾ ದಿನದ ಧ್ವಜಾರೋಹಣ ವಿಳಂಬ: ಕೆಎನ್ಎನ್ಎಲ್ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

(ವರದಿ: ಅಮರೇಶ ಭೋವಿ)

ಕವಿತಾಳ: ಕಲ್ಯಾಣ ಕರ್ನಾಟಕ ವಿಮೋಚನಾ ದಿನ ಹಾಗೂ ವಿಶ್ವಕರ್ಮ ಜಯಂತಿ ಅಂಗವಾಗಿ ಪಟ್ಟಣದ ಕೆಎನ್ ಎನ್ಎಲ್ ನಂ.2 ಕಾಲುವೆ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರ ಕಚೇರಿಯಲ್ಲಿ ನಿಗದಿತ ಸಮಯಕ್ಕೆ ಕಾರ್ಯಕ್ರಮ ಹಾಗೂ ರಾಷ್ಟ್ರಧ್ವಜಾರೋಹಣ ನಡೆಯಲಿಲ್ಲ ಎಂದು ಸ್ಥಳೀಯ ಸಂಘಟನೆಗಳು ಆರೋಪಿಸಿವೆ.

> “ಕವಿತಾಳದಲ್ಲಿರುವ ನಮ್ಮ ಇಲಾಖೆಯ ಕಚೇರಿಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನದಂದು ನಿಗದಿತ ಸಮಯಕ್ಕೆ ಧ್ವಜಾರೋಹಣ ನಡೆಯದಿರುವುದು ವಿಷಾದನೀಯ. ಈ ಕುರಿತು ಮಾಹಿತಿ ದೊರೆತಿದ್ದು, ಕಾರ್ಯಕ್ರಮ ವಿಳಂಬವಾಗಿರುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗುವುದು. ಅವರಿಂದ ಬರುವ ವಿವರಣೆಯನ್ನು ಪರಿಶೀಲಿಸಿ, ಕರ್ತವ್ಯಲೋಪ ಅಥವಾ ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಸರ್ಕಾರದ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು.”
>
> **- ಕೋದಂಡರಾಮ**
>
> ಜಿಲ್ಲಾ ಕಾರ್ಯಪಾಲಕ ಅಭಿಯಂತರ, ನೀರಾವರಿ ಇಲಾಖೆ, ರಾಯಚೂರು

ಸೆ.17ರಂದು ಆಚರಿಸಲಾದ ಕಲ್ಯಾಣ ಕರ್ನಾಟಕ ವಿಮೋಚನಾ ದಿನದಂದು ಸರ್ಕಾರಿ ಕಚೇರಿಯಲ್ಲಿ ಸಮಯಕ್ಕೆ ಸರಿಯಾಗಿ ಧ್ವಜಾರೋಹಣ ನಡೆಯದಿರುವ ಬಗ್ಗೆ ಸಾರ್ವಜನಿಕರು ಹಾಗೂ ಸಂಘಟನೆಗಳ ಪ್ರತಿನಿಧಿಗಳು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಇದೇ ರೀತಿಯ ಘಟನೆ ಈ ಕಚೇರಿಯಲ್ಲಿ ಈ ಹಿಂದೆಯೂ ನಡೆದಿತ್ತು ಎಂದು ಅವರು ಆರೋಪಿಸಿದ್ದಾರೆ.




ವಿಷಯ ಕುರಿತು ಕಚೇರಿಗೆ ತೆರಳಿ ಪ್ರಶ್ನಿಸಿದ ಸಂದರ್ಭದಲ್ಲಿ ಎಇಇ ವಿದ್ಯಾಸಾಗರ್ ಸಮರ್ಪಕವಾಗಿ ಸ್ಪಂದಿಸಲಿಲ್ಲ ಎಂದು ಸಂಘಟನೆಗಳ ಪ್ರತಿನಿಧಿಗಳು ದೂರಿದ್ದಾರೆ. ನಂತರ ವಿಷಯವನ್ನು ಇಲಾಖೆಯ ಮೇಲಾಧಿಕಾರಿಗಳು ಹಾಗೂ ಸಿರವಾರ ತಹಶೀಲ್ದಾರ್ ಅವರ ಗಮನಕ್ಕೆ ತಂದ ಬಳಿಕ ತಡವಾಗಿ ಧ್ವಜಾರೋಹಣ ಮತ್ತು ವಿಮೋಚನಾ ದಿನಾಚರಣೆ ನಡೆಸಲಾಯಿತು ಎಂದು ತಿಳಿಸಿದ್ದಾರೆ.

ಭೀಮ ಆರ್ಮಿ ಅಧ್ಯಕ್ಷ ಅಜಪ್ಪ ಬುಳ್ಳಾಪುರ ಮಾತನಾಡಿ, ಮಹತ್ವದ ದಿನದಂದು ನಿಗದಿತ ಸಮಯಕ್ಕೆ ರಾಷ್ಟ್ರಧ್ವಜಾರೋಹಣ ನಡೆಯದಿರುವುದು ನಿರ್ಲಕ್ಷ್ಯದ ಸಂಕೇತವಾಗಿದೆ. ಘಟನೆ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಕರ್ತವ್ಯಲೋಪ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಎಇಇ ವಿದ್ಯಾಸಾಗರ್ ಅವರನ್ನು ಅಮಾನತುಗೊಳಿಸಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮಕ್ಕೆ ಇಲಾಖೆಯಿಂದ ಪೂರ್ವ ಸೂಚನೆ ನೀಡಲಾಗಿತ್ತೇ, ಜವಾಬ್ದಾರಿ ಯಾರಿಗೆ ವಹಿಸಲಾಗಿತ್ತು, ನಿಗದಿತ ಸಮಯಕ್ಕೆ ಆಚರಣೆ ನಡೆಯದಿರಲು ಕಾರಣವೇನು ಹಾಗೂ ಸಾರ್ವಜನಿಕರ ಆಕ್ಷೇಪದ ನಂತರವೇ ಕಾರ್ಯಕ್ರಮ ನಡೆಸಲು ಕಾರಣವೇನು ಎಂಬುದನ್ನು ಮೇಲಾಧಿಕಾರಿಗಳು ಸ್ಪಷ್ಟಪಡಿಸಬೇಕು ಎಂದು ಸಂಘಟನೆಗಳು ಆಗ್ರಹಿಸಿವೆ.

> “ಕಲ್ಯಾಣ ಕರ್ನಾಟಕ ವಿಮೋಚನಾ ದಿನದಂದು ನಿಗದಿತ ಸಮಯಕ್ಕೆ ಧ್ವಜಾರೋಹಣ ನಡೆಸದೆ ನಿರ್ಲಕ್ಷ್ಯ ತೋರಿರುವುದು ಖಂಡನೀಯ. ಇದೇ ರೀತಿಯ ಘಟನೆ ಮತ್ತೆ ಸಂಭವಿಸಿರುವುದರಿಂದ ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಸಮಗ್ರ ತನಿಖೆ ನಡೆಸಬೇಕು. ಕರ್ತವ್ಯಲೋಪ ಸಾಬೀತಾದರೆ ಕೂಡಲೇ ಅಮಾನತು ಮಾಡಬೇಕು. ಇಲ್ಲವಾದಲ್ಲಿ ಸಂಘಟನೆಯ ವತಿಯಿಂದ ಕಾನೂನುಬದ್ಧ ಹೋರಾಟ ನಡೆಸಲಾಗುವುದು.”
>
> **- ಅಜಪ್ಪ ಬುಳ್ಳಾಪುರ**
>
> ಅಧ್ಯಕ್ಷ, ಭೀಮ ಆರ್ಮಿ ಸಂಘಟನೆ, ಕವಿತಾಳ

ರಾಷ್ಟ್ರೀಯ ಹಾಗೂ ಪ್ರಾದೇಶಿಕ ಮಹತ್ವದ ದಿನಗಳ ಆಚರಣೆಯನ್ನು ಕೇವಲ ಔಪಚಾರಿಕತೆಗೆ ಸೀಮಿತಗೊಳಿಸದೆ, ನಿಗದಿತ ಮಾರ್ಗಸೂಚಿ ಮತ್ತು ಆಡಳಿತಾತ್ಮಕ ಶಿಸ್ತಿನೊಂದಿಗೆ ನಡೆಸಬೇಕು. ಘಟನೆಗೆ ಸಂಬಂಧಿಸಿದ ದಾಖಲೆಗಳು ಹಾಗೂ ಅಧಿಕಾರಿಗಳ ವಿವರಣೆಯನ್ನು ಪರಿಶೀಲಿಸಿ ವಾಸ್ತವಾಂಶ ಬಹಿರಂಗಪಡಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಶೈಕ್ಷಣಿಕ ಪ್ರಗತಿಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಕೊಡುಗೆ ಮಹತ್ವದ್ದು: ಎನ್.ಎಸ್. ಬೋಸರಾಜು

ಕವಿತಾಳ್: ರಾಜ್ಯದ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಕೊಡುಗೆ ಮಹತ್ವದ್ದಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಹೇಳಿದರು. ಅವರು ಪ್ರಸ್ತುತ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾಗಿದ್ದಾರೆ.

ಸಿರವಾರ ತಾಲೂಕಿನ ಕವಿತಾಳ್ದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಖಾಸಗಿ ಶಿಕ್ಷಣ ಸಂಸ್ಥೆಗಳು ಸರ್ಕಾರಿ ಶಿಕ್ಷಣ ವ್ಯವಸ್ಥೆಯೊಂದಿಗೆ ಕೈಜೋಡಿಸಿ ವಿದ್ಯಾರ್ಥಿಗಳಿಗೆ ಶಿಕ್ಷಣ ಒದಗಿಸುತ್ತಿವೆ. ಶಿಕ್ಷಕರು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹತ್ವದ ಜವಾಬ್ದಾರಿ ಹೊಂದಿದ್ದು, ಅವರ ಸೇವೆಯನ್ನು ಗುರುತಿಸಿ ಗೌರವಿಸುವುದು ಅಗತ್ಯ ಎಂದು ಬೋಸರಾಜು ಹೇಳಿದರು.

ಒಕ್ಕೂಟದ ತಾಲೂಕು ಘಟಕದ ಅಧ್ಯಕ್ಷ ಪ್ರಕಾಶ ಪಾಟೀಲ್ ಮಾತನಾಡಿ, ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅಗತ್ಯ ಕಾನೂನಾತ್ಮಕ ಭದ್ರತೆ ಒದಗಿಸಬೇಕು. ಕೆಕೆಆರ್‌ಡಿಬಿ ಅನುದಾನದಡಿ ಖಾಸಗಿ ಶಿಕ್ಷಣ ಸಂಸ್ಥೆಗಳ ಮೂಲಸೌಕರ್ಯ ಅಭಿವೃದ್ಧಿಗೂ ಅನುದಾನ ಕಲ್ಪಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಮುಖಂಡ ಮಹಾಂತೇಶ ಪಾಟೀಲ್ ಅತ್ತನೂರು ಮಾತನಾಡಿ, ಶಿಕ್ಷಣವೇ ದೇಶದ ಬಹುದೊಡ್ಡ ಸಂಪತ್ತು. ಉತ್ತಮ ಶಿಕ್ಷಕರನ್ನು ಗುರುತಿಸಿ ಪ್ರೋತ್ಸಾಹಿಸುವುದರಿಂದ ಶಿಕ್ಷಣ ಕ್ಷೇತ್ರದಲ್ಲಿ ಮತ್ತಷ್ಟು ಸಾಧನೆಗೆ ಪ್ರೇರಣೆ ದೊರೆಯುತ್ತದೆ ಎಂದರು. ಉತ್ತಮ ಶಿಕ್ಷಕರಿಗೆ ಪ್ರತಿವರ್ಷ ತಲಾ 8 ಗ್ರಾಂ ಚಿನ್ನದ ಪದಕ ನೀಡುತ್ತಿರುವ ಶಾಸಕ ಜಿ. ಹಂಪಯ್ಯ ನಾಯಕ ಅವರ ಕಾರ್ಯವನ್ನು ಅವರು ಶ್ಲಾಘಿಸಿದರು. ಹಂಪಯ್ಯ ನಾಯಕ ಅವರು ಮಾನ್ವಿ ವಿಧಾನಸಭಾ ಕ್ಷೇತ್ರದ ಹಾಲಿ ಶಾಸಕರಾಗಿದ್ದಾರೆ.

ಕಲ್ಮಠದ ಅಭಿನವ ಸಿದ್ಧಲಿಂಗ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು. ಚೀಟಿ ಎತ್ತುವ ಮೂಲಕ ಆಯ್ಕೆಯಾದ ಭಾಗ್ಯಲಕ್ಷ್ಮಿ, ರಾಜಮ್ಮ ಕರಿಬಸವ, ಭೀಮಯ್ಯ ಸೇರಿದಂತೆ ನಾಲ್ವರು ಶಿಕ್ಷಕರಿಗೆ ತಲಾ 8 ಗ್ರಾಂ ಚಿನ್ನದ ಪದಕ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಪಂಚಾಯಿತಿ ಅಧ್ಯಕ್ಷೆ ರಾಜೇಶ್ವರಿ ತಿಪ್ಪಯ್ಯಸ್ವಾಮಿ, ನಾಗರಾಜ ಮಸ್ಕಿ ಸೇರಿದಂತೆ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಪದಾಧಿಕಾರಿಗಳು, ಶಿಕ್ಷಕರು ಹಾಗೂ ಸ್ಥಳೀಯ ಗಣ್ಯರು ಉಪಸ್ಥಿತರಿದ್ದರು.

# ಕವಿತಾಳದಲ್ಲಿ ಪ್ರಜಾಸೇವೆ ಆಂದೋಲನ: 23 ಅಹವಾಲು ಸ್ವೀಕಾರ

ಕವಿತಾಳ: ಪಟ್ಟಣದ ನಾಡಕಚೇರಿ ಆವರಣದಲ್ಲಿ ಹೋಬಳಿ ಮಟ್ಟದ ಪ್ರಜಾಸೇವೆ ಆಂದೋಲನ ಕಾರ್ಯಕ್ರಮ ತಹಶೀಲ್ದಾರ್ ಹಾಗೂ ದಂಡಾಧಿಕಾರಿಗಳ ನೇತೃತ್ವದಲ್ಲಿ ನಡೆಯಿತು. ಸರ್ಕಾರದ ವಿವಿಧ ಯೋಜನೆಗಳನ್ನು ಜನರ ಬಳಿಗೆ ತಲುಪಿಸುವುದು ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ ಪರಿಹಾರ ಕಲ್ಪಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

ತಹಶೀಲ್ದಾರ್ ಅಶೋಕ್ ಪವರ್ ಮಾತನಾಡಿ, ಸಿರವಾರ ತಾಲೂಕಿನಲ್ಲಿ ತಾಂತ್ರಿಕ ಕಾರಣಗಳಿಂದ ಕೆಲವು ಫಲಾನುಭವಿಗಳಿಗೆ ಮಾಸಾಶನ ತಲುಪದಿರುವ ಕುರಿತು ವಿವರಿಸಿದರು. ರಾಜ್ಯದಲ್ಲಿ ಸುಮಾರು 23 ಲಕ್ಷ ಮಾಸಾಶನಗಳನ್ನು ವಿವಿಧ ಕಾರಣಗಳಿಂದ ತಡೆಹಿಡಿಯಲಾಗಿದ್ದು, ಜಿಎಸ್‌ಟಿ ಪಾವತಿದಾರರು, ಎಪಿಎಲ್ ಕಾರ್ಡ್ ಹೊಂದಿರುವವರು, ವಾರ್ಷಿಕ ಆದಾಯ ₹1.20 ಲಕ್ಷಕ್ಕಿಂತ ಹೆಚ್ಚಿರುವವರು ಹಾಗೂ ಅರ್ಹ ವಯಸ್ಸಿನ ಮಾನದಂಡ ಪೂರೈಸದ ಪ್ರಕರಣಗಳನ್ನು ಮರುಪರಿಶೀಲಿಸಲಾಗುತ್ತಿದೆ ಎಂದು



ತಿಳಿಸಿದರು. ಅರ್ಹ ಫಲಾನುಭವಿಗಳಿಗೆ ಮಾಸಾಶನ ಮರುಪ್ರಾರಂಭಿಸಲು ಕ್ರಮ ನಡೆಯುತ್ತಿದೆ ಎಂದರು.

ಕೃಷಿ ಇಲಾಖೆ ಅಧಿಕಾರಿ ಶಿವಶರಣ ಭೋವಿ ಮಾತನಾಡಿ, ಮಳೆ ಕೊರತೆಯಿಂದ ಬೆಳೆ ಹಾನಿಯಾಗಿದ್ದು, ಮುಂದಿನ ಮಳೆಯ ಸಾಧ್ಯತೆಯನ್ನು ಗಮನಿಸಿ ರೈತರು ಕಡಲೆ, ಜೋಳ, ಕುಸುಬೆ ಮತ್ತಿತರ ಬೆಳೆಗಳ ಬಿತ್ತನೆಗೆ ಸಿದ್ಧತೆ ಮಾಡಿಕೊಳ್ಳಬಹುದು ಎಂದರು. ಪಿಎಂ ಕಿಸಾನ್ ಯೋಜನೆಯ ಹಣ ಪಡೆಯಲು ರೈತರು ಇ-ಕೆವೈಸಿ ಹಾಗೂ ಫೇಸ್ ಅಥೆಂಟಿಕೇಶನ್ ಪೂರ್ಣಗೊಳಿಸಬೇಕು ಎಂದು ಸಲಹೆ ನೀಡಿದರು.

ನೇಗಿಲ ಯೋಗಿ ಯೋಜನೆಯಡಿ ಸಣ್ಣ ರೈತರಿಗೆ ಕೃಷಿ ಯಂತ್ರೋಪಕರಣ ಬಳಕೆಗೆ ಸಹಾಯಧನ ನೀಡಲಾಗುತ್ತಿದ್ದು, ಕವಿತಾಳ ಹೋಬಳಿಯಲ್ಲಿ 150 ಟ್ರ್ಯಾಕ್ಟರ್ ಮಾಲೀಕರ ಆರ್‌ಸಿ ದಾಖಲೆಗಳನ್ನು ಆಪ್ ಮೂಲಕ ಅಪ್‌ಲೋಡ್ ಮಾಡಿ ಒಪ್ಪಿಗೆ ಪಡೆಯಲಾಗಿದೆ ಎಂದು ಮಾಹಿತಿ ನೀಡಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಜಸ್ಪಾಲ್ ಸಿಂಗ್ ಇ-ಖಾತಾ ಹಾಗೂ ಬಿ-ಖಾತಾ ಕುರಿತು ಮಾಹಿತಿ ನೀಡಿದರು. ತಾಪಂ ಇಒ ಮಂಜುನಾಥ್ ಗ್ರಾಮೀಣಾಭಿವೃದ್ಧಿ ಯೋಜನೆಗಳ ಬಗ್ಗೆ ವಿವರಿಸಿದರೆ, ಸಿಡಿಪಿಒ ವಿರುಪಾಕ್ಷ ಗೃಹಲಕ್ಷ್ಮಿ ಯೋಜನೆಯ ಮರುಪರಿಶೀಲನೆಗಾಗಿ ಮನೆಮನೆಗೆ ಭೇಟಿ ನೀಡಿ ಆಧಾರ್, ಪಡಿತರ ಚೀಟಿ ಹಾಗೂ ಅಗತ್ಯ ದಾಖಲೆಗಳನ್ನು ಮೊಬೈಲ್ ಆಪ್ ಮೂಲಕ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಒಟ್ಟು 23 ಅಹವಾಲುಗಳು ಸಲ್ಲಿಕೆಯಾಗಿದ್ದು, ಕಂದಾಯ ಇಲಾಖೆಗೆ 12, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಕೃಷಿ, ಪಟ್ಟಣ ಪಂಚಾಯಿತಿ ಹಾಗೂ ಸಾರಿಗೆ ಇಲಾಖೆಗೆ ತಲಾ 2 ಮತ್ತು ತಾಲೂಕು ಪಂಚಾಯಿತಿ, ನೀರಾವರಿ ಇಲಾಖೆ ಹಾಗೂ ಹಿರೇಹಣಗಿ ಗ್ರಾಮ ಪಂಚಾಯಿತಿಗೆ ತಲಾ ಒಂದು ಅರ್ಜಿ ಬಂದಿವೆ.

ಶಿಕ್ಷಣ ಇಲಾಖೆ, ಪಿಆರ್‌ಡಿ, ಪಿಡಬ್ಲ್ಯೂಡಿ ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳು ಗೈರುಹಾಜರಾಗಿದ್ದಕ್ಕೆ ಕೆಲ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜೆಸ್ಕಾಂ ಜೆಇ ಜಲಾಲ, ಉಪನೋಂದಣಿ ಇಲಾಖೆಯ ಅಧಿಕಾರಿ ಪದ್ಮನಾಭ, ಉಪತಹಶೀಲ್ದಾರ್ ಮಂಜುನಾಥ್, ಗ್ರಾಮ ಆಡಳಿತ ಅಧಿಕಾರಿ ಸದಾಕಲಿ ಅರಕೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬೆಳೆ ಪರಿಹಾರ, ಸಾಲಮನ್ನಾಗೆ ರೈತ ಸಂಘ ಆಗ್ರಹ

ಲಿಂಗಸುಗೂರು: ಲಿಂಗಸುಗೂರು ಹಾಗೂ ಮಸ್ಕಿ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ರೈತರಿಗೆ ತ್ವರಿತವಾಗಿ ಬೆಳೆ ಪರಿಹಾರ ನೀಡಬೇಕು, ಕೃಷಿ ಸಾಲ ಮನ್ನಾ ಮಾಡಬೇಕು ಹಾಗೂ ಎಪಿಎಂಸಿಯಲ್ಲಿ ನಡೆಯುತ್ತಿದೆ ಎನ್ನಲಾದ ಅವ್ಯವಹಾರಗಳ ಕುರಿತು ತನಿಖೆ ನಡೆಸಬೇಕು ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಅಧ್ಯಕ್ಷ ಈರಣ್ಣ ಗುಡಿಹಾಳ ಮತ್ತು ಶಿವು ನಂದಿಹಾಳ ಒತ್ತಾಯಿಸಿದರು.

ಪ್ರಜಾ ಸೇವಾ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಅವರು, ಈ ಬಾರಿ ಮಳೆ ಕೊರತೆಯಿಂದ ಲಿಂಗಸುಗೂರು ತಾಲೂಕಿನ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ತೊಗರಿ, ಸೂರ್ಯಕಾಂತಿ,



ಸಜ್ಜೆ, ಮೆಣಸಿನಕಾಯಿ, ಹತ್ತಿ ಸೇರಿದಂತೆ ವಿವಿಧ ಬೆಳೆಗಳು ಒಣಗಿದ್ದು, ರೈತರಿಗೆ ಆರ್ಥಿಕ ನಷ್ಟ ಉಂಟಾಗಿದೆ ಎಂದು ತಿಳಿಸಿದರು.

ಜಾನುವಾರುಗಳಿಗೆ ಮೇವಿನ ಕೊರತೆಯೂ ಎದುರಾಗಿರುವುದರಿಂದ ಸರ್ಕಾರ ಕೂಡಲೇ ಮೇವು ಕೇಂದ್ರಗಳನ್ನು ಆರಂಭಿಸಬೇಕು. ದಾಳಿಂಬೆ ಬೆಳೆಗಾರರು ವಿವಿಧ ರೋಗಗಳು ಹಾಗೂ ಪ್ರತಿಕೂಲ ಹವಾಮಾನದಿಂದ ಬೆಳೆ ನಷ್ಟ ಅನುಭವಿಸಿದ್ದು, ಅವರಿಗೆ ಪರಿಹಾರ ಒದಗಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಜೋಳ ಖರೀದಿ ಕೇಂದ್ರಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಬೇಕು. ಎಪಿಎಂಸಿಯಲ್ಲಿ ರೈತರಿಂದ ತೂಕದಲ್ಲಿ 5 ಕೆಜಿ ಕಡಿತ ಮಾಡಲಾಗುತ್ತಿದೆ ಎಂಬ ಆರೋಪವಿದ್ದು, ಈ ಕುರಿತು ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಬೆಳೆ ವಿಮೆ ಹಾಗೂ ಬೆಳೆ ಪರಿಹಾರ ವಿತರಣೆಯಲ್ಲಿಯೂ ಅಕ್ರಮ ನಡೆದಿದೆ ಎಂದು ಆರೋಪಿಸಿದ ರೈತ ಮುಖಂಡರು, ಅಧಿಕಾರಿಗಳು ಮತ್ತು ಮಧ್ಯವರ್ತಿಗಳ ಶಾಮೀಲಾತಿಯಿಂದ ಪ್ರೀಮಿಯಂ ಪಾವತಿಸಿದ ಅರ್ಹ ರೈತರಿಗೆ ವಿಮೆ ಹಾಗೂ ಪರಿಹಾರ ದೊರೆಯುತ್ತಿಲ್ಲ. ಈ ಕುರಿತು ಸಮಗ್ರ ತನಿಖೆ ನಡೆಸಿ ಅರ್ಹ ರೈತರಿಗೆ ಹಣ ತಲುಪಿಸಬೇಕು ಎಂದು ಆಗ್ರಹಿಸಿದರು.

ನಾರಾಯಣಪುರ ಜಲಾಶಯಕ್ಕಾಗಿ ಮನೆ ಹಾಗೂ ಜಮೀನು ಕಳೆದುಕೊಂಡ ರಾಮಪುರ ಭಾಗದ ನದಿ ಪಾತ್ರದ ರೈತರಿಗೆ ನೀರಿನ ಹಂಚಿಕೆಯಲ್ಲಿ ತಾರತಮ್ಯ ಮಾಡಲಾಗುತ್ತಿದೆ ಎಂಬ ಆರೋಪವಿದ್ದು, ಆ ಭಾಗದ ರೈತರಿಗೆ ನಿರಂತರವಾಗಿ ನೀರು ಒದಗಿಸಬೇಕು ಎಂದು ಮನವಿಯಲ್ಲಿ ಕೋರಲಾಗಿದೆ.

ಈ ಸಂದರ್ಭದಲ್ಲಿ ಸಂಗನಗೌಡ ಹೊಸೂರು, ಬಸನಗೌಡ, ಖಾಜಾವಲಿ, ದೊಡ್ಡಪ್ಪ ನಿಲೋಗಲ್, ಸಗರಪ್ಪ, ಧರ್ಮಣ್ಣ ಜಂಗಿರ ರಾಮಪುರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶಿಕ್ಷಕರ ದಿನಾಚರಣೆ: 144 ಶಿಕ್ಷಕಶಿಕ್ಷಕಿಯರಿಗೆ ಪ್ರಶಸ್ತಿ ಪ್ರದಾನ



ಜಾಲಹಳ್ಳಿ: ಶಿಕ್ಷಣ ಕ್ಷೇತ್ರದಲ್ಲಿ ಖಾಸಗಿ ಶಾಲಾ ಶಿಕ್ಷಕರು ಸಲ್ಲಿಸುತ್ತಿರುವ ಸೇವೆಯನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಜಾಲಹಳ್ಳಿಯಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕಶಿಕ್ಷಕಿಯರ ಪ್ರಶಸ್ತಿ ಪ್ರದಾನ ಸಮಾರಂಭ ಶನಿವಾರ ನಡೆಯಿತು.

ಕಾರ್ಯಕ್ರಮದ ಅಂಗವಾಗಿ ಬಸವೇಶ್ವರ ವೃತ್ತದಿಂದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರದೊಂದಿಗೆ ಮೆರವಣಿಗೆ ನಡೆಸಲಾಯಿತು. ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರು, ಶಿಕ್ಷಕಿಯರು ಹಾಗೂ ಶಿಕ್ಷಣಾಭಿಮಾನಿಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಬಳಿಕ ತಿಂತಿಣಿ ಬ್ರಿಡ್ಜ್ ರಸ್ತೆಯಲ್ಲಿರುವ ಶ್ರೀ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಸಹಕಾರ ಸಭಾಭವನದಲ್ಲಿ ಸಮಾರಂಭ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ್, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು. ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ವಿಶೇಷ ಅನುದಾನದಡಿ ಸೌಲಭ್ಯ ಕಲ್ಪಿಸುವ ಕುರಿತು ಕೂಡ ಕ್ರಮ ಕೈಗೊಳ್ಳಲಾಗುವುದು ಎಂದರು. ಕರೆಮ್ಮ ಜಿ. ನಾಯಕ್ ಅವರು ದೇವದುರ್ಗ ಕ್ಷೇತ್ರದ ಶಾಸಕರಾಗಿದ್ದಾರೆ.

ಒಕ್ಕೂಟದ ರಾಯಚೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜ್ ಮಸ್ಕಿ ಮಾತನಾಡಿ, ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಅಗತ್ಯವಿದೆ. ಕೆಕೆಆರ್‌ಡಿಬಿ ಅನುದಾನದಡಿ ಜಿಲ್ಲೆಯ ಖಾಸಗಿ ಶಾಲಾ ಶಿಕ್ಷಕಶಿಕ್ಷಕಿಯರಿಗೆ ತಲಾ ₹5 ಲಕ್ಷ ವಿಮಾ ಸೌಲಭ್ಯ ಕಲ್ಪಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯ ಹಿಂದೆ ಶಿಕ್ಷಕರ ಪರಿಶ್ರಮ ಪ್ರಮುಖವಾಗಿದ್ದು, ವಿದ್ಯಾರ್ಥಿಗಳ ಸಾಧನೆಯೊಂದಿಗೆ ಶಿಕ್ಷಕರ ಕೊಡುಗೆಯನ್ನೂ ಗುರುತಿಸುವ ವ್ಯವಸ್ಥೆ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಒಕ್ಕೂಟದ ರಾಯಚೂರು ಜಿಲ್ಲಾಧ್ಯಕ್ಷ ಹಾಗೂ ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗಕ್ಕೆ ಅನುಗುಣವಾಗಿ ವಿದ್ಯಾರ್ಥಿಗಳಲ್ಲಿ ಕೌಶಲ್ಯಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳು ಹೊಸ ಆವಿಷ್ಕಾರ ಹಾಗೂ ಆಧುನಿಕ ಬೋಧನಾ ವಿಧಾನಗಳನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದರು. ಹಂಪನಗೌಡ ಬಾದರ್ಲಿ ಅವರು ಸಿಂಧನೂರು ಕ್ಷೇತ್ರದ ಶಾಸಕರಾಗಿರುವುದನ್ನು ಕರ್ನಾಟಕ ವಿಧಾನಸಭೆಯ ದಾಖಲೆಗಳು ದೃಢಪಡಿಸುತ್ತವೆ.

ಖಾಸಗಿ ಶಾಲಾ ಶಿಕ್ಷಕರಿಗೆ ₹5 ಲಕ್ಷ ವಿಮಾ ಸೌಲಭ್ಯ ಕಲ್ಪಿಸುವ ಬೇಡಿಕೆಯನ್ನು ಸರ್ಕಾರದ ಮಟ್ಟದಲ್ಲಿ ಪ್ರಸ್ತಾಪಿಸಿ, ಕೆಕೆಆರ್‌ಡಿಬಿ ಅನುದಾನದಡಿ ಈ ಸೌಲಭ್ಯ ದೊರಕಿಸಲು ಪ್ರಯತ್ನಿಸಲಾಗುವುದು ಎಂದು ಅವರು ತಿಳಿಸಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಶಿಕ್ಷಣದೊಂದಿಗೆ ವಿದ್ಯಾರ್ಥಿಗಳಲ್ಲಿ ನೈತಿಕ ಮೌಲ್ಯ, ಸಂಸ್ಕಾರ ಹಾಗೂ ಸಾಮಾಜಿಕ ಜವಾಬ್ದಾರಿ ಬೆಳೆಸುವತ್ತ ಶಿಕ್ಷಕರು ಗಮನ ಹರಿಸಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಗೂ ಸರ್ಕಾರ ಅಗತ್ಯ ನೆರವು ನೀಡಬೇಕು ಎಂದು ಹೇಳಿದರು.

ಬೆಂಗಳೂರಿನ ವಿಶೇಷ ಉಪನ್ಯಾಸಕ ವಿವೇಕಾನಂದ ಎಚ್.ಕೆ. ಅವರು ವಿಶೇಷ ಉಪನ್ಯಾಸ ನೀಡಿ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಜವಾಬ್ದಾರಿ ಮಹತ್ವದ್ದಾಗಿದೆ. ಶಿಕ್ಷಕರು ಕಾಲಕ್ಕೆ ತಕ್ಕಂತೆ ತಮ್ಮ ಜ್ಞಾನ ಹಾಗೂ ಬೋಧನಾ ಕೌಶಲ್ಯವನ್ನು ವೃದ್ಧಿಸಿಕೊಳ್ಳಬೇಕು ಎಂದು ಹೇಳಿದರು.

202627ನೇ ಸಾಲಿನಲ್ಲಿ ಉತ್ತಮ ಸೇವೆ ಸಲ್ಲಿಸಿದ ಶಿಕ್ಷಕಶಿಕ್ಷಕಿಯರನ್ನು ಗುರುತಿಸಿ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಜಿಲ್ಲಾ ಮಟ್ಟದಲ್ಲಿ ಸಿಂಧನೂರಿನ ಸನ್‌ಶೈನ್ ಶಾಲೆಯ ಶಿಕ್ಷಕಿ ಶಗುಫ್ತಾ ಬೇಗಂ ಅವರಿಗೆ ಪ್ರಥಮ ಪ್ರಶಸ್ತಿ ನೀಡಲಾಗಿದ್ದು, ಒಟ್ಟು 94 ಶಿಕ್ಷಕಶಿಕ್ಷಕಿಯರಿಗೆ ಜಿಲ್ಲಾ ಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಯಿತು.

ತಾಲೂಕು ಮಟ್ಟದ ಪ್ರಥಮ ಪ್ರಶಸ್ತಿಯನ್ನು ಹೂವಿನಹಡಗಿಯ ನ್ಯಾಷನಲ್ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಸುನಿಲ್ ಕುಮಾರ್ ಅವರಿಗೆ ನೀಡಲಾಯಿತು. ತಾಲೂಕು ಮಟ್ಟದಲ್ಲಿ ಒಟ್ಟು 50 ಶಿಕ್ಷಕಶಿಕ್ಷಕಿಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ನಿಜಲಿಂಗ ಮಹಾಸ್ವಾಮಿಗಳು, ಪೂಜ್ಯ ಶ್ರೀ ಸಿದ್ಧಯ್ಯತಾತ ಗುರುವಿನ್ ಸೇರಿದಂತೆ ವಿವಿಧ ಮಠಾಧೀಶರು ದಿವ್ಯ ಸಾನಿಧ್ಯ ವಹಿಸಿದ್ದರು. ಒಕ್ಕೂಟದ ಪದಾಧಿಕಾರಿಗಳು, ವಿವಿಧ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಶಿಕ್ಷಕ ಶಿಕ್ಷಕಿಯರು, ವಕೀಲರು, ಅಧಿಕಾರಿಗಳು, ಶಿಕ್ಷಣಾಭಿಮಾನಿಗಳು ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ₹25 ಸಾವಿರ ಮೌಲ್ಯದ ಕಲಿಕಾ ಸಾಮಗ್ರಿ ದೇಣಿಗೆ



ರಾಯಚೂರು: ತಾಲೂಕಿನ ದಿನ್ನಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ನೆರವಾಗುವ ಉದ್ದೇಶದಿಂದ ಗ್ರಾಮದ ದಾನಿ ದುಳ್ಳಯ್ಯ (ಕುಕನೂರು) ಅವರು ಸುಮಾರು ₹25 ಸಾವಿರಕ್ಕೂ ಅಧಿಕ ಮೌಲ್ಯದ ಕಲಿಕಾ ಸಾಮಗ್ರಿಗಳನ್ನು ಶಾಲೆಗೆ ದೇಣಿಗೆಯಾಗಿ ನೀಡಿದ್ದಾರೆ.

ಎಸ್‌ಡಿಎಂಸಿ ಸದಸ್ಯ ಶಂಶುದ್ದೀನ್ ಅವರ ಸಹಕಾರದೊಂದಿಗೆ ಶಾಲೆಗೆ ಭೇಟಿ ನೀಡಿದ ದುಳ್ಳಯ್ಯ ಅವರು, 10ನೇ ತರಗತಿ ವಿದ್ಯಾರ್ಥಿಗಳಿಗಾಗಿ ಎಲ್ಲಾ ವಿಷಯಗಳಿಗೆ ಸಂಬಂಧಿಸಿದ ಪರಿಷ್ಕೃತ ಕಲಿಕಾ ಫಲ ಆಧಾರಿತ ಮೌಲ್ಯಮಾಪನ ಪ್ರಶ್ನೆಕೋಠಿಯ (ಎಲ್‌ಬಿಎ) 60 ಪ್ರತಿಗಳನ್ನು ತಮ್ಮ ಸ್ವಂತ ವೆಚ್ಚದಲ್ಲಿ ವಿತರಿಸಿದರು.

ಕಲ್ಯಾಣ ಕರ್ನಾಟಕ ದಿನಾಚರಣೆ ಅಂಗವಾಗಿ ಶಾಲೆಯಲ್ಲಿ ನಡೆದ ಧ್ವಜಾರೋಹಣ ಕಾರ್ಯಕ್ರಮದ ಸಂದರ್ಭದಲ್ಲಿ ದುಳ್ಳಯ್ಯ ಅವರನ್ನು ಶಾಲೆಯ ಮುಖ್ಯಗುರುಗಳು ಹಾಗೂ ಎಸ್‌ಡಿಎಂಸಿ ಪದಾಧಿಕಾರಿಗಳು ಸನ್ಮಾನಿಸಿ ಗೌರವಿಸಿದರು.

ಪ್ರೌಢಶಾಲೆಯ ಮುಖ್ಯಗುರು ರಮಾದೇವಿ ಮಾತನಾಡಿ, ಶಿಕ್ಷಕರು, ಪಾಲಕರು, ವಿದ್ಯಾರ್ಥಿಗಳು ಹಾಗೂ ಗ್ರಾಮದ ದಾನಿಗಳ ಸಹಕಾರದಿಂದ ಸರ್ಕಾರಿ ಶಾಲೆಗಳನ್ನು ಮತ್ತಷ್ಟು ಅಭಿವೃದ್ಧಿಪಡಿಸಲು ಸಾಧ್ಯವಿದೆ. ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳಿಗೆ ಇಂತಹ ನೆರವು ದೊರೆತಾಗ ಅವರಲ್ಲಿ ಓದಿನ ಬಗ್ಗೆ ಆಸಕ್ತಿ ಹಾಗೂ ಆತ್ಮವಿಶ್ವಾಸ ಹೆಚ್ಚುತ್ತದೆ ಎಂದರು.

ವಿದ್ಯಾರ್ಥಿಗಳ ಕಲಿಕೆಗೆ ಅಗತ್ಯವಾದ ಪ್ರಶ್ನೆಕೋಠಿಗಳನ್ನು ನೀಡುವ ಮೂಲಕ ದುಳ್ಳಯ್ಯ ಅವರು ಮಕ್ಕಳ ಶೈಕ್ಷಣಿಕ ಸಾಧನೆಗೆ ಪ್ರೋತ್ಸಾಹ ನೀಡಿದ್ದಾರೆ. ಅವರ ಶಿಕ್ಷಣಪರ ಕಾಳಜಿ ಶ್ಲಾಘನೀಯ ಎಂದು ತಿಳಿಸಿ ಶಾಲೆಯ ಪರವಾಗಿ ಕೃತಜ್ಞತೆ ಸಲ್ಲಿಸಿದರು.

ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಕಷ್ಟಗಳು ಸಾಧನೆಗೆ ಅಡ್ಡಿಯಾಗುವುದಿಲ್ಲ. ಪರಿಶ್ರಮ ಮತ್ತು ಬದ್ಧತೆಯಿಂದ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು. ಇದೇ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅನೇಕ ವಿದ್ಯಾರ್ಥಿಗಳು ಇಂದು ಉನ್ನತ ಸ್ಥಾನಗಳಲ್ಲಿ ಸೇವೆ ಸಲ್ಲಿಸುತ್ತಿದ್ದು, ಅವರನ್ನು ಮಾದರಿಯಾಗಿಟ್ಟುಕೊಂಡು ಉತ್ತಮ ಸಾಧನೆ ಮಾಡಿ ಶಾಲೆ, ಗ್ರಾಮ ಹಾಗೂ ಪಾಲಕರಿಗೆ ಕೀರ್ತಿ ತರಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ದಾನಿ ದುಳ್ಳಯ್ಯ, ಶಿಕ್ಷಣಪ್ರೇಮಿ ರಾಜಪ್ಪಗೌಡ ಮಾಲಿಪಾಟೀಲ್, ಪ್ರೌಢಶಾಲೆಯ ಎಸ್ ಡಿಎಂಸಿ ಅಧ್ಯಕ್ಷ ರಮೇಶ್ ನಾಯಕ್, ಸದಸ್ಯರಾದ ಶಂಸುದ್ದೀನ್, ನರೇಂದ್ರಗೌಡ, ಬಸವರಾಜ್ ಹೆಚ್., ನರಸಿಂಹ, ಎಂ. ನರಸಿಂಹ ಬಾಸ್, ಭೀಮಪ್ಪ, ಪ್ರಾಥಮಿಕ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಶಿವರಾಜ್, ಸದಸ್ಯರಾದ ಭೀಮರಾಯ, ಎಂ. ಗೋಪಾಲ, ದೇಶಪ್ಪ, ಪ್ರಾಥಮಿಕ ಶಾಲೆಯ ಮುಖ್ಯಗುರು ಗೋಪಾಲ್ ರೆಡ್ಡಿ, ಶಿಕ್ಷಕರಾದ ಕೋದಂಡ ರೆಡ್ಡಿ, ರಶ್ಮಿ, ಡೇವಿಡ್, ಶಾಂತ ಹಿರೇಮಠ, ಮರಿಯಾ, ಎಂ. ಗಿರಿಯಪ್ಪ ದಿನ್ನಿ, ಶಿಲ್ಪಮ್ಮ, ಪ್ರಜ್ವಲ್, ವೆಂಕಟೇಶ್, ಭೀಮೇಶ್, ಜ್ಯೋತಿ, ಶೈಲಜಾ, ಶಾಹಿನ್ ಸೇರಿದಂತೆ ಅತಿಥಿ ಶಿಕ್ಷಕರು, ಗ್ರಾಮದ ಮುಖಂಡರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

# ಬಾಯಿದೊಡ್ಡಿಯಲ್ಲಿ ಬಿಜೆಪಿ ಮುಖಂಡರು ಕಾಂಗ್ರೆಸ್ ಸೇರ್ಪಡೆ



ರಾಯಚೂರು: ತಾಲೂಕಿನ ಬಾಯಿದೊಡ್ಡಿ ಗ್ರಾಮದಲ್ಲಿ ಬಿಜೆಪಿಯ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಪಕ್ಷ ತೊರೆದು ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು ಎಂದು ಕಾರ್ಯಕ್ರಮದ ಆಯೋಜಕರು ತಿಳಿಸಿದ್ದಾರೆ. ಬಾಯಿದೊಡ್ಡಿ ಗ್ರಾಮವು ರಾಯಚೂರು ತಾಲೂಕಿನ ವ್ಯಾಪ್ತಿಗೆ ಸೇರಿದೆ.

ರವಿ ಬೋಸರಾಜ್ ಹಾಗೂ ಶ್ರೀನಿವಾಸ್ ರೆಡ್ಡಿ ಅವರ ಸಮ್ಮುಖದಲ್ಲಿ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮುಖಂಡರು ಮತ್ತು ಕಾರ್ಯಕರ್ತರಿಗೆ ಕಾಂಗ್ರೆಸ್ ಶಾಲು ಹೊದಿಸಿ ಪಕ್ಷಕ್ಕೆ ಬರಮಾಡಿಕೊಳ್ಳಲಾಯಿತು ಎಂದು ತಿಳಿಸಲಾಗಿದೆ.

ಎಲ್‌ಐಸಿ ವೀರೇಶ್, ದುಬಣ್ಣ, ನರೇಶ್, ನರಸಿಂಹಲು, ದುಬ್ಬ ಅಕ್ಷಯ್ ಕುಮ್ಹಾರ್, ಬಸವರಾಜ್, ವೆಂಕಟೇಶ್, ಬಾಪನಯ್ಯ, ವಿನಯ್, ರಾಮಾಚಾರಿ, ಗೋಪಾಲ್, ವೀರೇಶ್ ರಾಂಪುರ್ ಸೇರಿದಂತೆ ಹಲವು ಮುಖಂಡರು ಮತ್ತು ಕಾರ್ಯಕರ್ತರು ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು ಎಂದು ಆಯೋಜಕರು ತಿಳಿಸಿದ್ದಾರೆ.

ಇದೇ ವೇಳೆ ಸ್ಥಳೀಯ ಮುಖಂಡ ಆಟೋ ತಿಮ್ಮಪ್ಪ ಅವರು ಬಿಜೆಪಿ ತೊರೆದು ಕಾಂಗ್ರೆಸ್ ಸೇರಿರುವುದಾಗಿ ಕಾರ್ಯಕ್ರಮದಲ್ಲಿ ಘೋಷಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡರು, ಬಾಯಿದೊಡ್ಡಿಯಲ್ಲಿ ಪಕ್ಷದ ಸಂಘಟನೆ ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಎಲ್ಲ ಮುಖಂಡರು ಹಾಗೂ ಕಾರ್ಯಕರ್ತರನ್ನು ಒಗ್ಗೂಡಿಸಿಕೊಂಡು ಮುಂದಿನ ದಿನಗಳಲ್ಲಿ ಸಂಘಟನಾತ್ಮಕ ಚಟುವಟಿಕೆಗಳನ್ನು ವಿಸ್ತರಿಸಲಾಗುವುದು ಎಂದು ಹೇಳಿದರು.

ಗ್ರಾಮದ ಹಿರಿಯ ಮುಖಂಡರು, ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸ್ಥಳೀಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಜೋಳದ ಬಾಕಿ ಹಣ ಕೇಳಿದ ರೈತರ ಮೇಲೆ ಪ್ರಕರಣ ಆರೋಪ: ಅಮೀನ್ ಪಾಷಾ ದಿದ್ದಿಗಿ




ಮಾನ್ವಿ: ಜೋಳ ಖರೀದಿ ಕೇಂದ್ರಗಳ ಮೂಲಕ ಮಾರಾಟ ಮಾಡಿದ ಬೆಳೆ ಹಣವನ್ನು ಪಾವತಿಸುವಂತೆ ಒತ್ತಾಯಿಸಿ ಹೋರಾಟ ನಡೆಸಿದ ರೈತರ ಮೇಲೆಯೇ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಅಮೀನ್ ಪಾಷಾ ದಿದ್ದಿಗಿ ಆರೋಪಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ರೈತರು ಹಿಂಗಾರು ಮತ್ತು ಮುಂಗಾರು ಅವಧಿಯಲ್ಲಿ ಖರೀದಿ ಕೇಂದ್ರಗಳಿಗೆ ಜೋಳ ಮಾರಾಟ ಮಾಡಿದ್ದು, ಕೆಲ ರೈತರ ಖಾತೆಗಳಿಗೆ ಮಾತ್ರ ಹಣ ಜಮೆಯಾಗಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯ ರೈತರಿಗೆ ಬಾಕಿ ಪಾವತಿಯಾಗಬೇಕಿದೆ ಎಂದು ಹೇಳಿದರು. ಜೋಳದ ಬಾಕಿ ಪಾವತಿಗೆ ಒತ್ತಾಯಿಸಿ ಸೆ.15ರಂದು ಪೋತ್ನಾಳದಲ್ಲಿ ರೈತರು ರಸ್ತೆ ತಡೆ ನಡೆಸಿರುವುದು ವರದಿಯಾಗಿದೆ. ಖರೀದಿಸಿದ ಜೋಳದ ಹಣ ಐದಾರು ತಿಂಗಳಾದರೂ ಪಾವತಿಯಾಗಿಲ್ಲ ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿತ್ತು.

ಸಮರ್ಪಕ ಮಳೆಯ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದು, ಬಾಕಿ ಹಣವನ್ನು ತಕ್ಷಣ ರೈತರ ಖಾತೆಗಳಿಗೆ ಜಮೆ ಮಾಡುವಂತೆ ತಾಲೂಕು ಹಾಗೂ ಜಿಲ್ಲಾಡಳಿತ ಸೇರಿದಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ. ಜೊತೆಗೆ ಪೋತ್ನಾಳ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲಕ್ಕಾಗಿ ಮಸ್ಕಿ ಜಲಾಶಯದಿಂದ ಪೋತ್ನಾಳ ಹಿರೇಹಳ್ಳಕ್ಕೆ ನೀರು ಹರಿಸಬೇಕು ಎಂಬ ಬೇಡಿಕೆಯನ್ನೂ ಮುಂದಿಡಲಾಗಿದೆ ಎಂದು ತಿಳಿಸಿದರು.

ಈ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಸೆ.15ರಂದು ಪೋತ್ನಾಳ ಗ್ರಾಮದಲ್ಲಿ ರೈತ ಸಂಘ, ಹಸಿರು ಸೇನೆ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳೊಂದಿಗೆ ಪ್ರತಿಭಟನೆ ನಡೆಸಲಾಗಿತ್ತು. ಅಧಿಕಾರಿಗಳ ಭರವಸೆಯ ಹಿನ್ನೆಲೆಯಲ್ಲಿ ಹೋರಾಟವನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಗಿತ್ತು ಎಂದು ಹೇಳಿದರು.

ರೈತರ ಹೋರಾಟದ ಕುರಿತು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಸುದ್ದಿಗೋಷ್ಠಿಯಲ್ಲಿ ನೀಡಿರುವ ಹೇಳಿಕೆಗಳಿಗೆ ಆಕ್ಷೇಪ ವ್ಯಕ್ತಪಡಿಸಿದ ಅಮೀನ್ ಪಾಷಾ, ರೈತರು ಮತ್ತು ಹೋರಾಟದ ವರದಿ ಮಾಡಿದ ಪತ್ರಕರ್ತರ ಕುರಿತು ಅವರು ಹಗುರವಾಗಿ ಮಾತನಾಡಿದ್ದಾರೆ ಎಂದು ಆರೋಪಿಸಿದರು. ಈ ಕುರಿತು ಬೋಸರಾಜು ಅವರ ಪ್ರತಿಕ್ರಿಯೆ ಲಭ್ಯವಾಗಿಲ್ಲ.

ಶಾಂತಿಯುತವಾಗಿ ಬೇಡಿಕೆಗಳನ್ನು ಮುಂದಿಟ್ಟ ರೈತರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂಬ ಮಾಹಿತಿ ಬಂದಿದೆ ಎಂದು ಹೇಳಿದ ಅವರು, ಅಂತಹ ಪ್ರಕರಣಗಳಿದ್ದರೆ ಅವುಗಳನ್ನು ಹಿಂಪಡೆಯಬೇಕು, ರೈತರ ಬಾಕಿ ಹಣ ಪಾವತಿಸಬೇಕು, ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮರ್ಪಕ ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಹಾಗೂ ಪತ್ರಕರ್ತರಿಗೆ ರಕ್ಷಣೆ ಒದಗಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಜೋಳ ಖರೀದಿ ಬಾಕಿ ಪಾವತಿ ವಿಚಾರವಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರು ಸೆ.17ರಂದು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ತಿಳಿಸಿದ್ದು, ಜಿಲ್ಲೆಯಲ್ಲಿ ₹358 ಕೋಟಿ ಜೋಳ ಖರೀದಿ ಹಣ ಈಗಾಗಲೇ ಪಾವತಿಸಲಾಗಿದೆ ಎಂದು ಹೇಳಿರುವುದಾಗಿ ವರದಿಯಾಗಿದೆ.

ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು. ಅಗತ್ಯವಿದ್ದರೆ ಮಾಜಿ ಸಚಿವರ ನಿವಾಸದ ಮುಂದೆ ಸಾವಿರಾರು ರೈತರೊಂದಿಗೆ ಪ್ರತಿಭಟನೆ ನಡೆಸಲಾಗುವುದು ಎಂದು ಅಮೀನ್ ಪಾಷಾ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ಕೆ.ವೈ. ಬಸವರಾಜ ನಾಯಕ, ತಾಲೂಕು ಅಧ್ಯಕ್ಷ ಹೋಳಿಯಪ್ಪ ಉಟಕನೂರು, ನಾಗನಗೌಡ, ದುರುಗಪ್ಪ ತಡಕಲ್, ರವಿಕುಮಾರ, ಬಸವಲಿಂಗ, ಅಮರೇಶ ಜಿನ್ನೂರ್, ಶಿವಕುಮಾರ ತಡಕಲ್, ಮಹಾದೇವ ಯಾದವ್, ಬುಜ್ಜಿಗೌಡ, ಅಮರೇಶ ನವಲಿ, ಶಿವಪ್ಪ, ಶ್ರೀಧರ, ಅಮರೇಶ ಗುಡದಿನ್ನಿ, ಶಿವಪುತ್ರಪ್ಪ, ಶರಣಬಸವ, ಯಲ್ಲಪ್ಪ, ಸಿದ್ದನಗೌಡ, ನಾಗು ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ: ಸಂಪಾದಕರ ಸಭೆ ಯಶಸ್ವಿ



ರಾಯಚೂರು, ಸೆ.19: ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಅಂಗವಾಗಿ ನಗರದ ಪತ್ರಿಕಾ ಭವನದಲ್ಲಿ ವಿವಿಧ ದಿನಪತ್ರಿಕೆಗಳ ಸಂಪಾದಕರ ಸಭೆ ಯಶಸ್ವಿಯಾಗಿ ನಡೆಯಿತು.

ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಕ್ಟೋಬರ್ ತಿಂಗಳ ಕೊನೆಯ ವಾರದಲ್ಲಿ ಆಯೋಜಿಸಲು ಉದ್ದೇಶಿಸಿರುವ ಬೆಳ್ಳಿ ಮಹೋತ್ಸವ ಸಮಾರಂಭವನ್ನು ಅರ್ಥಪೂರ್ಣ ಹಾಗೂ ಯಶಸ್ವಿಯಾಗಿ ನಡೆಸುವ ಕುರಿತು ಚರ್ಚಿಸಲಾಯಿತು. ಕಾರ್ಯಕ್ರಮದ ಯಶಸ್ಸಿಗೆ ಸಂಪಾದಕರು ಅಗತ್ಯ ಸಲಹೆ-ಸೂಚನೆಗಳನ್ನು ನೀಡುವಂತೆ ಗಿಲ್ಡ್ ವತಿಯಿಂದ ಕೋರಲಾಯಿತು.

ಬೆಳ್ಳಿ ಮಹೋತ್ಸವದ ಅಂಗವಾಗಿ ರಾಜ್ಯಮಟ್ಟದ ಕಥೆ ಮತ್ತು ಕವನಗಳನ್ನು ಒಳಗೊಂಡ ಸಾಹಿತ್ಯ ಕೃತಿ, ಜಿಲ್ಲೆಯ ಪ್ರಮುಖ ಹೋರಾಟಗಳ ಕುರಿತ ಪುಸ್ತಕಗಳು ಹಾಗೂ ಸ್ಮರಣ ಸಂಚಿಕೆ ಹೊರತರುವ ಯೋಜನೆಯ ಕುರಿತು ಸಭೆಯಲ್ಲಿ ಮಾಹಿತಿ ನೀಡಲಾಯಿತು. ಸಮಾರಂಭದ ಸಿದ್ಧತೆ ಹಾಗೂ ವಿವಿಧ ಕಾರ್ಯಕ್ರಮಗಳಿಗೆ ಎಲ್ಲರ ಸಹಕಾರ ಅಗತ್ಯವಿದೆ ಎಂದು ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್ ಮನವಿ ಮಾಡಿದರು.

ಸಂಪಾದಕರಾದ ಸುಶೀಲೇಂದ್ರ ಸೋದೆಗಾರ, ಆರ್. ಗುರುನಾಥ್, ಚನ್ನಬಸವ ಬಾಗಲವಾಡ, ಶಿವಕುಮಾರ, ವಿಶ್ವನಾಥ ಸ್ವಾಮಿ, ವೀರಭದ್ರಪ್ಪ, ಮಹಾನಂದ, ಅಣ್ಣಪ್ಪ ಮೇಟಿಗೌಡ ಸೇರಿದಂತೆ ಹಲವರು ಬೆಳ್ಳಿ ಮಹೋತ್ಸವವನ್ನು ಸ್ಮರಣೀಯ ಹಾಗೂ ಅರ್ಥಪೂರ್ಣವಾಗಿಸಲು ವಿವಿಧ ಸಲಹೆಗಳನ್ನು ನೀಡಿದರು.

ಗಿಲ್ಡ್ ಪ್ರಧಾನ ಕಾರ್ಯದರ್ಶಿ ವೆಂಕಟೇಶ ಹೂಗಾರ ಸ್ವಾಗತಿಸಿದರು. ಸಭೆಯಲ್ಲಿ ವಿವಿಧ ದಿನಪತ್ರಿಕೆಗಳ ಸಂಪಾದಕರಾದ ಖಾನ್ ಸಾಬ್ ಮೋಮಿನ್, ಗಿರಿಧರ ಕುಲಕರ್ಣಿ, ಶಿವಮೂರ್ತಿ ಹಿರೇಮಠ, ಆನಂದ ವಿಕೆ, ಈರಪ್ಪ ಮಂಡಲಗೇರಾ, ಪ್ರಸನ್ನ ಜೈನ್, ಖ್ವಾಜಾ ಹುಸೇನ್, ಶ್ರೀನಿವಾಸ, ಗಿಲ್ಡ್ ಜಂಟಿ ಕಾರ್ಯದರ್ಶಿ ಶ್ರೀಕಾಂತ ಸಾವೂರು ಹಾಗೂ ಸದಸ್ಯರಾದ ಮಲ್ಲನಗೌಡ, ರಾಚಯ್ಯಸ್ವಾಮಿ, ಜಗನ್ನಾಥ ಪೂಜಾರಿ, ಭೀಮೇಶ ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮನೆ ಬಾಗಿಲಿಗೆ ಆಡಳಿತ ಸೇವೆ: ಕಪಗಲ್‌ನಲ್ಲಿ ಪ್ರಜಾಸೇವೆ ಆಂದೋಲನ



ಮಾನ್ವಿ: ಸಾರ್ವಜನಿಕರಿಗೆ ಸರ್ಕಾರದ ವಿವಿಧ ಆಡಳಿತಾತ್ಮಕ ಸೇವೆಗಳನ್ನು ಮನೆ ಬಾಗಿಲಿನಲ್ಲೇ ತಲುಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಪ್ರಜಾಸೇವೆ ಅಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದು ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ಹೇಳಿದರು.

ತಾಲೂಕಿನ ಕಪಗಲ್ ಗ್ರಾಮದ ಸರ್ಕಾರಿ ಶಾಲಾ ಆವರಣದಲ್ಲಿ ತಾಲೂಕು ಆಡಳಿತದ ವತಿಯಿಂದ ಆಯೋಜಿಸಿದ್ದ ಕಪಗಲ್ ಹೋಬಳಿ ಮಟ್ಟದ ಪ್ರಜಾಸೇವೆ ಅಂದೋಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾರ್ವಜನಿಕರು ರಸ್ತೆ, ಶುದ್ಧ ಕುಡಿಯುವ ನೀರು, ಗ್ರಾಮ ಪಂಚಾಯಿತಿ ಸೇವೆಗಳು, ವಿವಿಧ ಸಾಮಾಜಿಕ ಭದ್ರತಾ ವೇತನಗಳು, ಪಡಿತರ ಚೀಟಿ, ರೈತರ ಯೋಜನೆಗಳು ಸೇರಿದಂತೆ ವಿವಿಧ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ತಮ್ಮ ಕುಂದುಕೊರತೆಗಳು ಹಾಗೂ ಬೇಡಿಕೆಗಳನ್ನು ಸೂಕ್ತ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ಮೂಲಕ ಅಧಿಕಾರಿಗಳ ಗಮನಕ್ಕೆ ತರಬಹುದು. ಸಾಧ್ಯವಾದ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಫಲಾನುಭವಿಗಳಿಗೆ ಹಕ್ಕುಪತ್ರ ಹಾಗೂ ಆದೇಶ ಪತ್ರಗಳನ್ನು ವಿತರಿಸಲಾಯಿತು.

ಸಾರ್ವಜನಿಕರಿಂದ ಕಂದಾಯ ಇಲಾಖೆಗೆ 6, ತಾಲೂಕು ಪಂಚಾಯಿತಿಗೆ 10, ಶಿಕ್ಷಣ ಇಲಾಖೆಗೆ 1, ರೈಲ್ವೆ ಇಲಾಖೆಗೆ 1, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ 2 ಹಾಗೂ ಸರ್ವೆ ಇಲಾಖೆಗೆ 4 ಅರ್ಜಿಗಳು ಸೇರಿದಂತೆ ಒಟ್ಟು 24 ಅರ್ಜಿಗಳು ಸಲ್ಲಿಕೆಯಾಗಿವೆ.

ಅರಣ್ಯ ಇಲಾಖೆ, ತಾಲೂಕು ಪಂಚಾಯಿತಿ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ವತಿಯಿಂದ ಸಾರ್ವಜನಿಕರಿಗೆ ದೊರೆಯುವ ಯೋಜನೆಗಳು ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡುವ ಮಳಿಗೆಗಳನ್ನು ತೆರೆಯಲಾಗಿತ್ತು.

ಕಾರ್ಯಕ್ರಮದಲ್ಲಿ ಗ್ರೇಡ್-2 ತಹಶೀಲ್ದಾರ್ ಅಬ್ದುಲ್ ವಾಹಿದ್, ತಾಲೂಕು ಪಂಚಾಯಿತಿ ಇಒ ಖಾಲಿದ್ ಅಹ್ಮದ್, ಬಿಸಿಎಂ ಇಲಾಖೆ ತಾಲೂಕು ಸಹಾಯಕ ನಿರ್ದೇಶಕ ಭಾಗಯ್ಯ ನಾಯಕ, ಸಮಾಜ ಕಲ್ಯಾಣಾಧಿಕಾರಿ ಸಾಯಿರಾ ಬಾನು ನಾದಪ್, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ., ತಾಲೂಕು ಆರೋಗ್ಯಾಧಿಕಾರಿ ಡಾ. ಶರಣಬಸವರಾಜ, ವಲಯ ಅರಣ್ಯಾಧಿಕಾರಿ ಪುರುಷೋತ್ತಮರಾವ್ ಜೀ., ಗ್ರಾಮ ಪಂಚಾಯಿತಿ ಪಿಡಿಒ ಜುಬೇರ್ ನಾಯಕ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಓಂ ಗ್ರೂಪ್ ಅಸೋಸಿಯೇಷನ್‌ನಿಂದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ




ರಾಯಚೂರು: ನಗರದ ಎಲ್‌ಬಿಎಸ್ ನಗರದಲ್ಲಿರುವ ಶ್ರೀ ವೀರ ಹನುಮಾನ್ ದೇವಸ್ಥಾನ, ಚಂದ್ರಬಂಡಾ ರಸ್ತೆಯಲ್ಲಿ ಶ್ರೀ ಗೌರಿ ಗಣೇಶ ಹಬ್ಬದ ಅಂಗವಾಗಿ ಪ್ರತಿ ವರ್ಷದಂತೆ ಈ ವರ್ಷವೂ ಓಂ ಗ್ರೂಪ್ ಅಸೋಸಿಯೇಷನ್ ವತಿಯಿಂದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ನಾಗರಾಜ ಭಾಲ್ಕಿ, "ಆರೋಗ್ಯವೇ ಭಾಗ್ಯ. ದೇವರು ನೀಡಿರುವ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಜೊತೆಗೆ ರಾಯಚೂರು ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತವಾಗಿಸುವುದು ಹಾಗೂ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡುವುದು ನಮ್ಮೆಲ್ಲರ ಕರ್ತವ್ಯ" ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ವೈದ್ಯಾಧಿಕಾರಿ ಡಾ. ಅರುಣ್ ಮಸ್ಕಿ ಮಾತನಾಡಿ, ಆಸ್ಪತ್ರೆಗೆ ತೆರಳಲು ಸಾಧ್ಯವಾಗದವರಿಗೆ ಇಂತಹ ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಬಹಳ ಸಹಕಾರಿಯಾಗುತ್ತವೆ. ಸಾರ್ವಜನಿಕರು ಇಂತಹ ಶಿಬಿರಗಳ ಸದುಪಯೋಗ ಪಡೆದುಕೊಂಡು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅರುಣ್ ಪಾಟೀಲ್ ಮಾತನಾಡಿ, ಓಂ ಗ್ರೂಪ್ ಅಸೋಸಿಯೇಷನ್ ವತಿಯಿಂದ ಆರೋಗ್ಯ ತಪಾಸಣೆಯ ಜೊತೆಗೆ ವಿವಿಧ ಶೈಕ್ಷಣಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿ. ಓಂಕಾರ ಯಾದವ ಮಾತನಾಡಿ, "ಸಮಾಜಮುಖಿ ಕಾರ್ಯಕ್ರಮಗಳ ಯಶಸ್ಸಿಗೆ ಸಾರ್ವಜನಿಕರ ಸಹಕಾರವೇ ಪ್ರಮುಖವಾಗಿದೆ. ಆರೋಗ್ಯ ಶಿಬಿರದ ಯಶಸ್ಸಿಗೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸುತ್ತೇನೆ. ಮುಂದಿನ ದಿನಗಳಲ್ಲಿಯೂ ಎಲ್ಲರೂ ಒಗ್ಗಟ್ಟಾಗಿ ಇನ್ನಷ್ಟು ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸೋಣ" ಎಂದರು.

ವೇದಿಕೆಯಲ್ಲಿ ವೈದ್ಯಾಧಿಕಾರಿ ಡಾ. ಶುಶ್ರುತ್, ರಿಮ್ಸ್ ವೈದ್ಯೆ ಡಾ. ಶಿಲ್ಪಾ ದಿವಾಕರ, ವೈದ್ಯಾಧಿಕಾರಿ ಡಾ. ಸತೀಶ್, ಡಾ. ನಿಖಿಲ್, ಸೈಯದ್ ಕೌಸರ್ ಹುಸೇನ್, ವೈದ್ಯಾಧಿಕಾರಿ ಡಾ. ಅಲ್ಲಾಭಕ್ಷ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ರಿಮ್ಸ್ ಆಸ್ಪತ್ರೆ ರಾಯಚೂರು, ಭಾಲ್ಕಿ ಆಸ್ಪತ್ರೆ ಹಾಗೂ ದೃಷ್ಟಿ ಕಣ್ಣಿನ ಆಸ್ಪತ್ರೆಯ ಸಿಬ್ಬಂದಿ ಶಿಬಿರದಲ್ಲಿ ಭಾಗವಹಿಸಿ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಿದರು.

ಕಾರ್ಯಕ್ರಮದ ಆಯೋಜಕರಾದ ದೇವರಾಜ, ಸಿದ್ದನಗೌಡ, ಜಗದೀಶ, ಷಣ್ಮುಖ, ರಮೇಶ್, ಸಂತೋಷ, ವಿಶಾಲ, ಶರಣು, ಪೂಜಾ, ಶ್ರೀಶೈಲ್, ಚಂದ್ರು ಸೇರಿದಂತೆ ಎಲ್‌ಬಿಎಸ್ ನಗರದ ಸಾರ್ವಜನಿಕರು ಪಾಲ್ಗೊಂಡಿದ್ದರು.

ವೇದಿಕೆ ಕಾರ್ಯಕ್ರಮವನ್ನು ಶುಶ್ರೂಷಕ ಅಧಿಕಾರಿ ಮಲ್ಲಿಕಾರ್ಜುನ ನಾಯಕ ಬೂದಿನಾಳ ನಿರೂಪಿಸಿದರು.

# ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ: ಯೋಗದಲ್ಲಿ ಬಸವಶ್ರೀ ಶಾಲೆ ವಿದ್ಯಾರ್ಥಿಗಳ ಸಾಧನೆ



ರಾಯಚೂರು, ಸೆ.19: ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ 202627ನೇ ಸಾಲಿನ ರಾಯಚೂರು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದ ಯೋಗ ಸ್ಪರ್ಧೆಯಲ್ಲಿ ಬಸವಶ್ರೀ ಶಾಲೆಯ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸೆ.18ರಂದು ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಸ್ಪರ್ಧೆಯಲ್ಲಿ ರವಿತೇಜ ಪ್ರಥಮ ಸ್ಥಾನ ಪಡೆದರೆ, ಸಾನ್ವಿಕಾ ಹಾಗೂ ನಿಹಾರಿಕಾ ದ್ವಿತೀಯ ಸ್ಥಾನ ಮತ್ತು ನಿವೇದಿತಾ ತೃತೀಯ ಸ್ಥಾನ ಪಡೆದು ವಿಜೇತರಾಗಿದ್ದಾರೆ.

ವೈಯಕ್ತಿಕ ಯೋಗ, ಸಾಂಪ್ರದಾಯಿಕ ಯೋಗ ಹಾಗೂ ಕಲಾತ್ಮಕ ಯೋಗ ವಿಭಾಗಗಳಲ್ಲಿ ವಿದ್ಯಾರ್ಥಿಗಳು ಉತ್ತಮ ಪ್ರದರ್ಶನ ನೀಡಿ ಪ್ರಶಸ್ತಿ ಪತ್ರಗಳನ್ನು ಪಡೆದಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲಾ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ಶ್ರೀ ಜಗನ್ನಾಥದಾಸರ 217ನೇ ಆರಾಧನಾ ಮಹೋತ್ಸವ: ಭಕ್ತಿಭಾವದಿಂದ ಪೂರ್ವಾರಾಧನೆ



ಮಾನ್ವಿ: ಪಟ್ಟಣದ ಶ್ರೀ ಮಂತ್ರಾಲಯ ಶ್ರೀ ರಾಘವೇಂದ್ರಸ್ವಾಮಿಗಳ ಮಠದ ಶ್ರೀ ಜಗನ್ನಾಥದಾಸರ ಸನ್ನಿಧಾನದಲ್ಲಿ ಶ್ರೀ ಜಗನ್ನಾಥದಾಸರ 217ನೇ ಆರಾಧನಾ ಮಹೋತ್ಸವದ ಅಂಗವಾಗಿ ಪೂರ್ವಾರಾಧನೆ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.

ಬೆಳಿಗ್ಗೆ ಸುಪ್ರಭಾತದೊಂದಿಗೆ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಯಿತು. ದಾಸಾರ್ಯ ಮಹಿಳಾ ಭಜನಾ ಮಂಡಳಿಯವರಿಂದ ಹರಿಕಥಾಮೃತಸಾರದ ಸಂಪೂರ್ಣ ಪಾರಾಯಣ ನಡೆಯಿತು. ಬಳಿಕ ಅಷ್ಟೋತ್ತರ ಸಹಿತ ಫಲಪಂಚಾಮೃತ, ವಿವಿಧ ವಿದ್ವಾಂಸರಿಂದ ಉಪನ್ಯಾಸ, ವಿಶೇಷ ಅಲಂಕಾರ, ಹಸ್ತೋದಕ ಹಾಗೂ ತೀರ್ಥಪ್ರಸಾದ ಕಾರ್ಯಕ್ರಮಗಳು ನೆರವೇರಿದವು.

ಪಂ. ದ್ವಾರಕನಾಥಾಚಾರ್ಯ ಅವರು ಶ್ರೀ ಜಗನ್ನಾಥದಾಸರ ಜೀವನ, ಸಾಹಿತ್ಯ ಹಾಗೂ ದಾಸ ಪರಂಪರೆಗೆ ನೀಡಿದ ಕೊಡುಗೆ ಕುರಿತು ಪ್ರವಚನ ನೀಡಿದರು. ಸಂಗೀತ ಕಲಾವಿದೆ ಶೃತಿ ಸಾಗರ ಅವರಿಂದ ವಿವಿಧ ಭಕ್ತಿಗೀತೆಗಳ ಗಾಯನ ನಡೆಯಿತು. ವಿಜಯೀಂದ್ರ ಸಾಗರ ತಬಲಾ ಸಾಥ್ ನೀಡಿದರೆ, ಪ್ರಭಂಜನ ಕುಲಕರ್ಣಿ ಹಾರ್ಮೋನಿಯಂ ನುಡಿಸಿದರು.

ಸಂಜೆ ಮೈಸೂರು ಸಂಸ್ಥಾನದ ದಿವಾನ ಪೂರ್ಣಯ್ಯ ಅವರು ನೀಡಿದ ಪಲ್ಲಕ್ಕಿಯ ಉತ್ಸವ ವಿಜೃಂಭಣೆಯಿಂದ ನಡೆಯಿತು. ಬಳಿಕ ಸ್ವಸ್ತಿವಾಚನ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ಜಗನ್ನಾಥದಾಸರ ಮೂಲ ಅರ್ಚಕ ವಂಶಸ್ಥರಾದ ನಮೃತ ಆಚಾರ್ಯ, ವ್ಯವಸ್ಥಾಪಕ ಶ್ರೀನಿವಾಸರಾವ ಕೊರ್ಲಹಳ್ಳಿ, ಅರ್ಚಕರಾದ ಪ್ರಲ್ಹಾದಾಚಾರ್ಯ, ಅಪ್ಪಣ್ಣಾಚಾರ್ಯ, ವಿಜಯೀಂದ್ರಾಚಾರ್ಯ ಇಭರಾಮಪೂರ, ರಾಘವೇಂದ್ರಾಚಾರ್ಯ ಚೀಕಲಪರ್ವಿ, ಹನುಮೇಶಾಚಾರ್ಯ ಯಾಟಗಲ್, ವೆಂಕಟೇಶ, ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಮುದ್ದುರಂಗರಾವ ಮುತಾಲಿಕ, ಟಿ. ಭೀಮಸೇನರಾವ, ನರಸಿಂಹಾಚಾರ್ಯ ಜಾನೇಕಲ್, ಎ.ಎನ್. ರಾಜು ವಕೀಲರು, ಪ್ರಲ್ಹಾದ ಕುರ್ಡಿ, ನರಸಿಂಹ ಅಪೂಟ, ಗೋಪಾಲ ಇಭರಾಮಪೂರ, ಜಗನ್ನಾಥ ರಾಮಪೂರ, ಜಗನ್ನಾಥ ಕಿರಸೂರ, ಪವನ ಕುಲಕರ್ಣಿ, ಜಯಸಿಂಹ ಗುಡಿ, ಬದ್ರಿ ಪುರೋಹಿತ್, ನಾರಾಯಣಾಚಾರ್ಯ ಅಪೂಟ, ಗೋಪಾಲ ಕಿರಸೂರ, ಸಲ್ಹಾದ ಜಾನೇಕಲ್ ಸೇರಿದಂತೆ ಸಾವಿರಾರು ಭಕ್ತರು ಭಾಗವಹಿಸಿದ್ದರು.

# ಲಿಂಗಸುಗೂರು ಪ್ರಜಾಸೇವಾ ಆಂದೋಲನ ಸಭೆ; 89 ಅಹವಾಲು ಸಲ್ಲಿಕೆ

ರಾಯಚೂರು ಸೆಪ್ಟಂಬರ್ 19 (ಕರ್ನಾಟಕ ವಾರ್ತೆ): ಜಿಲ್ಲೆಯ ಲಿಂಗಸುಗೂರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ರಾಯಚೂರು ಹಾಗೂ ತಾಲೂಕು ಆಡಳಿತ ಲಿಂಗಸುಗೂರು ಇವರ ವತಿಯಿಂದ ನಡೆದ ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಸಾರ್ವಜನಿಕರಿಂದ ಒಟ್ಟಾರೆಯಾಗಿ 89 ಅಹವಾಲುಗಳು ಸಲ್ಲಿಕೆಯಾಗಿವೆ ಎಂದು ಲಿಂಗಸುಗೂರು ತಹಶೀಲ್ದಾರ್ ಸತ್ಯಮ್ಮ ಅವರು ತಿಳಿಸಿದ್ದಾರೆ. ಕಂದಾಯ ಇಲಾಖೆ ಲಿಂಗಸುಗೂರು-26, ಪುರಸಭೆ ಲಿಂಗಸುಗೂರು-19, ತಾಲೂಕ ಪಂಚಾಯತ್ ಲಿಂಗಸುಗೂರು-17, ಡಿ.ಪಿ.ಎ.ಆ-ೠ05, ಅಂಬೇಡ್ಕರ ಅಭಿವೃದ್ಧಿ ನಿಗಮ-02, ಕೃಷಿ ಇಲಾಖೆ ಲಿಂಗಸುಗೂರು-03

ಜೆ.ಸ್ಕಾ ಲಿಂಗಸುಗೂರು-07, ಕ್ಷೇತ್ರ ಶಿಕ್ಷಣಾಧಿಕಾರಿಗಳು ಲಿಂಗಸುಗೂರು-01, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು-04, ಅರಣ್ಯ ಇಲಾಖೆ ಲಿಂಗಸುಗೂರು-02, ಆರೋಗ್ಯ ಇಲಾಖೆ ಲಿಂಗಸುಗೂರು-01, ಕೆಬಿಜೆಎನ್‌ಎಲ್ ಲಿಂಗಸುಗೂರು-01 ಹಾಗೂ ಸಣ್ಣ ನೀರಾವರಿ ಇಲಾಖೆ ಲಿಂಗಸುಗೂರು-01 ಸೇರಿದಂತೆ ಒಟ್ಟು 89 ಅರ್ಜಿಗಳು ಸ್ವೀಕೃತವಾಗಿವೆ ಎಂದು ಲಿಂಗಸುಗೂರು ತಹಶೀಲ್ದಾರರು ಮಾಹಿತಿ ನೀಡಿದರು.

# ಕಾಕತೀಯ ಶಾಲೆಯಲ್ಲಿ ಶ್ರದ್ಧಾ ಮೇಧಾ ತರಗತಿಗಳ ಉದ್ಘಾಟನೆ



ಮಾನ್ವಿ: ವಿದ್ಯಾರ್ಥಿಗಳು ಶಾಲಾ ಹಂತದಲ್ಲಿಯೇ ಜೀವನದ ಉನ್ನತ ಗುರಿಗಳನ್ನು ರೂಪಿಸಿಕೊಂಡು, ಯುಪಿಎಸ್‌ಸಿ ಹಾಗೂ ಕೆಪಿಎಸ್‌ಸಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳತ್ತ ಗಮನಹರಿಸಿ ವಿಶೇಷ ಅಧ್ಯಯನದಲ್ಲಿ ತೊಡಗಬೇಕು ಎಂದು ಡಾ. ವಸಂತ್ ಕುಮಾರ್ ಹೇಳಿದರು.

ನಗರದ ಕಾಕತೀಯ ಶಾಲೆಯಲ್ಲಿ ಸಮುತ್ಕರ್ಷ ಸಂಸ್ಥೆಯ ಶ್ರದ್ಧಾ ಮೇಧಾ ತರಗತಿಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮುತ್ಕರ್ಷ ಟ್ರಸ್ಟ್‌ನ ಅಶೋಕ್ ಕುಮಾರ್ ಪಾಟೀಲ್ ಅತನೂರು ಮಾತನಾಡಿ, ಇಂದಿನ ವಿದ್ಯಾರ್ಥಿಗಳೇ ಮುಂದಿನ ಸದೃಢ ಭಾರತದ ನಿರ್ಮಾತೃಗಳು. ಬಾಲ್ಯದಲ್ಲಿಯೇ ಉತ್ತಮ ಗುಣ, ಸಂಸ್ಕಾರ ಹಾಗೂ ಶಿಸ್ತು ಅಳವಡಿಸಿಕೊಂಡರೆ ಜವಾಬ್ದಾರಿಯುತ ಸತ್ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಕತೀಯ ಶಾಲೆಯ ಮುಖ್ಯಗುರು ವೀರಭದ್ರಗೌಡ, ಮಾನ್ವಿ ಸಮುತ್ಕರ್ಷ ತಂಡದ ಡಾ. ವಿವೇಕಾನಂದ ಹಬೀಬ್, ನರಸಿಂಹಮೂರ್ತಿ ದೇಸಾಯಿ, ರಜನಿ ಡಿ. ಉಪಸ್ಥಿತರಿದ್ದರು.

ಶ್ರದ್ಧಾ ಮೇಧಾ ತರಗತಿಯ ಹಳೆಯ ವಿದ್ಯಾರ್ಥಿಗಳು ಕಾರ್ಯಕ್ರಮ ನಿರೂಪಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K